# ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 221 RNI Number : KNKAN/25/A2770 21-08-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :221 ರಾಯಚೂರು 21-08-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563


# ರಾಜ್ಯದ ಸರ್ಕಾರಿ ಶಾಲೆಗಳಲ್ಲಿ 1,582 ಶೌಚಾಲಯಗಳ ನಿರ್ಮಾಣಕ್ಕೆ ಅನುಮೋದನೆ

ಬೆಂಗಳೂರು, ಆ.20-

ರಾಜ್ಯವಲಯ ಯೋಜನೆಯಡಿ 2025-26ನೇ ಸಾಲಿನಲ್ಲಿ ರಾಜ್ಯದ 1,250 ಸರ್ಕಾರಿ ಶಾಲೆಗಳಲ್ಲಿ 1,582 ಶೌಚಾಲಯಗಳನ್ನು ನಿರ್ಮಿಸಲು ಅನುಮೋದನೆ ನೀಡಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ವಿಧಾನಸಭೆಗೆ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಆಡಳಿತ ಪಕ್ಷದ ಶಾಸಕ ಯು.ಬಿ. ಬಣಕಾರ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ 136 ಶೌಚಾಲಯಗಳು ಮಂಜೂರಾಗಿವೆ. ಮೊದಲ ಹಂತದಲ್ಲಿ ಅತಿ ಹೆಚ್ಚು ವಿದ್ಯಾರ್ಥಿಗಳಿರುವ ಶಾಲೆಗಳಿಗೆ ಆದ್ಯತೆ ನೀಡಿ ಪರಿಗಣಿಸಲಾಗುತ್ತಿದೆ. ಶೌಚಾಲಯ ನಿರ್ಮಾಣಕ್ಕೆ ಸಂಬಂಧಿಸಿದಂತೆ 504.23 ಲಕ್ಷ ರೂ. ಅನುದಾನ ಹಾಗೂ ಶಾಲಾ ಕೊಠಡಿಗಳ ನಿರ್ಮಾಣಕ್ಕೆ 2,317 ಲಕ್ಷ ರೂ. ಅನುದಾನ ಉಳಿಕೆಯಾಗಿದೆ ಎಂದರು.

ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ 544 ಲಕ್ಷ ರೂ. ಅನುದಾನ ಹಾಗೂ ಪಿಎಂಶ್ರೀ ಯೋಜನೆಯಡಿ 216 ಶಾಲಾ ಕೊಠಡಿಗಳ ನಿರ್ಮಾಣಕ್ಕೆ 4,854.60 ಲಕ್ಷ ರೂ. ಅನುದಾನ ಮಂಜೂರಾಗಿದೆ ಎಂದು ಮಾಹಿತಿ ನೀಡಿದರು.

2025-26ನೇ ಸಾಲಿನ ಆಯವ್ಯಯ ಘೋಷಣೆಯಂತೆ 50 ಸರ್ಕಾರಿ ಪ್ರೌಢಶಾಲೆಗಳನ್ನು ಪದವಿಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲು ಸರ್ಕಾರ ಆದೇಶಿಸಿದೆ. ಅದರಂತೆ ಯಾದಗಿರಿ ಜಿಲ್ಲೆಯ



ಶಹಾಪುರ ತಾಲ್ಲೂಕಿನ ದೋರನಹಳ್ಳಿ ಪ್ರೌಢಶಾಲೆಯನ್ನು ಪದವಿಪೂರ್ವ ಕಾಲೇಜನ್ನಾಗಿ

ಉನ್ನತೀಕರಿಸಲು ಆದೇಶಿಸಲಾಗಿದೆ ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಅವರ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ಗೌರವಧನ ಹೆಚ್ಚಳಕ್ಕೆ ಆಗ್ರಹ

ಆಡಳಿತ ಪಕ್ಷದ ಶಾಸಕಿ ನಯನಾ ಮೋಟಮ್ಮ ಅವರು ಪದವಿಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ 14 ಸಾವಿರ ರೂ. ಮಾಸಿಕ ಗೌರವಧನ ನೀಡಲಾಗುತ್ತಿದ್ದು, ಅದನ್ನು ಹೆಚ್ಚಿಸಬೇಕು. ಕನಿಷ್ಠ ವೇತನ ನೀಡಬೇಕು. ಕಾಫಿ ತೋಟದಲ್ಲಿ ಕೆಲಸ ಮಾಡುವ ಕಾರ್ಮಿಕರಿಗಿಂತಲೂ ಕಡಿಮೆ ಗೌರವಧನ ದೊರೆಯುತ್ತಿದೆ. ಮಾಸಿಕ ರಜೆ, ಹೆರಿಗೆ ಸೌಲಭ್ಯ ಸೇರಿದಂತೆ ಹಲವು ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ಉತ್ತರಿಸಿದ ಸಚಿವ ಮಧು ಬಂಗಾರಪ್ಪ ಅವರು, 12 ಸಾವಿರ ರೂ. ಇದ್ದ ಗೌರವಧನವನ್ನು 14 ಸಾವಿರ ರೂ.ಗೆ ಹೆಚ್ಚಿಸಲಾಗಿದೆ. ಗೌರವಧನದ ಜೊತೆಗೆ ಯಾವುದೇ ಸೌಲಭ್ಯಗಳನ್ನು ನೀಡಲು ನಿಯಮಗಳಲ್ಲಿ ಅವಕಾಶವಿಲ್ಲ. ವಾರದಲ್ಲಿ 10 ಗಂಟೆಗಳ ಕಾರ್ಯಭಾರವನ್ನು ಅತಿಥಿ ಉಪನ್ಯಾಸಕರಿಗೆ ನಿಗದಿಪಡಿಸಲಾಗಿದೆ. ಮೆರಿಟ್ ಆಧಾರದ ಮೇಲೆ ಅತಿಥಿ ಉಪನ್ಯಾಸಕರ ನೇಮಕ ಮಾಡಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

### ಖರ್ಗೆ ಭಾಷಣದ ಸ್ಥಳ ಶುದ್ಧೀಕರಣ ಖಂಡಿಸಿ ಬಲಗೈ ಜಾತಿಗಳ ಒಕ್ಕೂಟದಿಂದ ಪ್ರತಿಭಟನೆ

## ಮುಂದೆ ಇಂತಹ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಿ. ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ. ಡಾ.ರಾಮಣ್ಣ ಗೋನವಾರ್

ಸಿಂಧನೂರು;

ರಾಷ್ಟ್ರೀಯ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಇವರು ಭಾಷಣ ಮಾಡಿದ ನಂತರ ಮನುವಾದಿಗಳು, ಜಾತಿವಾದಿಗಳು ಈ ಸ್ಥಳವನ್ನು ಶುದ್ಧೀಕರಣ (ಗೋ ಮೂತ್ರ ಹಾಕಿ) ಆ ಸ್ಥಳದಲ್ಲಿ ಹೋಮ ಹವನ ಮಾಡುವುದನ್ನು ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟ ತಾಲೂಕು ಸಮಿತಿ ವತಿಯಿಂದ ತೀವ್ರವಾಗಿ ಖಂಡಿಸುತ್ತಾ.ಇನ್ನು ಮುಂದೆ ಇಂತಹ ಘಟನೆಗಳು ನಡೆಯದಂತೆ ಕ್ರಮ ವಹಿಸುವ ತಾಲೂಕು ತಹಶೀಲ್ದಾರ್ ಕಛೇರಿ ಮುಂಭಾಗದಲ್ಲಿ ಪ್ರತಿಭಟನೆ



ನಡೆಸಿದರು.

ನಂತರ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಛಲವಾದಿ ಮಹಾಸಭಾದ ತಾಲೂಕು ಅಧ್ಯಕ್ಷರಾದ ಡಾ.ರಾಮಣ್ಣ ಗೋನವಾರ್ ಅವರು ಭಾರತಾಂಬೆಗೆ ಸ್ವಾತಂತ್ರ್ಯ ಬಂದು ಈಗಾಗಲೇ 80 ವರ್ಷಗಳಾದವು .ಶತಮಾನದ ಸ್ವಾತಂತ್ರ್ಯ ಹತ್ತಿರ ಭಾರತದ ಜನತೆ ಬಂದು ನಿಂತಿದೆ. ಆದರೆ ಇಂತಹ ಪರ್ವ ಕಾಲದಲ್ಲಿ ದಿ.08-08-2026 ರಂದು ಒಬ್ಬ ದಲಿತ ರಾಷ್ಟ್ರ ನಾಯಕ ಎ.ಐ.ಸಿ.ಸಿ. ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಜೀ ಯವರು ಸ್ವಾತಂತ್ರ್ಯ ಪೂರ್ವದ ಭಾಷಣವನ್ನು ನವದೆಹಲಿಯ ರಾಮಲೀಲಾ ಮೈದಾನದಲ್ಲಿ ಮಾಡಿದ ಒಂದು ಭಾರತ ದೇಶದ ಒಂದು ಇತಿಹಾಸ

3 ನೇ ಪುಟಕ್ಕೆ

## ಸಿಂಧನೂರಿನಲ್ಲಿ ಅಕ್ರಮ ಚಟುವಟಿಕೆಗಳ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕ್ರಮಕ್ಕೆ ಎಂಎಲ್ಸಿ ಬಸನಗೌಡ ಬಾದರ್ಲಿ ಒತ್ತಾಯ

ಬೆಂಗಳೂರು: ವಿಧಾನ ಪರಿಷತ್ ಅಧಿವೇಶನದಲ್ಲಿ ಇಂದು ಸಿಂಧನೂರು ತಾಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳ ಕುರಿತು ಸರ್ಕಾರದ ಗಮನ ಸೆಳೆದ ವಿಧಾನ ಪರಿಷತ್ ಸದಸ್ಯರಾದ ಬಸನಗೌಡ ಬಾದರ್ಲಿ ಅವರು, ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಮಾನ್ಯ ಗೃಹ ಸಚಿವರನ್ನು ಒತ್ತಾಯಿಸಿದರು.

ಸಿಂಧನೂರು ತಾಲೂಕಿನಲ್ಲಿ ಡ್ರಗ್ಸ್, ಗಾಂಜಾ, ಓಸಿ, ಇಸ್ಪೀಟ್, ಅಕ್ರಮ ಮರಳು ಸಾಗಾಟ ಹಾಗೂ ಆನ್‌ಲೈನ್ ಜೂಜಾಟಕ್ಕೆ ಸಂಬಂಧಿಸಿದಂತೆ ಇದುವರೆಗೆ ಎಷ್ಟು ಪ್ರಕರಣಗಳು ದಾಖಲಾಗಿವೆ, ಪ್ರಕರಣಗಳಲ್ಲಿ ಭಾಗಿಯಾಗಿರುವ ಆರೋಪಿಗಳ ವಿರುದ್ಧ ಯಾವ ರೀತಿಯ ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂಬ ಕುರಿತು ಸರ್ಕಾರದಿಂದ ಮಾಹಿತಿ ಕೇಳಲಾಯಿತು.

ಅದೇ ರೀತಿ, ತಾಲೂಕಿನಲ್ಲಿ ಇದುವರೆಗೆ ಎಷ್ಟು ಪ್ರಮಾಣದ ಡ್ರಗ್ಸ್ ಹಾಗೂ ಗಾಂಜಾವನ್ನು ಪತ್ತೆಹಚ್ಚಿ ವಶಪಡಿಸಿಕೊಳ್ಳಲಾಗಿದೆ, ವಶಪಡಿಸಿಕೊಂಡ ಮಾದಕ ವಸ್ತುಗಳನ್ನು ಎಲ್ಲಿ ಮತ್ತು ಯಾವ ಇಲಾಖೆಯ ವಶದಲ್ಲಿ ಶೇಖರಿಸಿಡಲಾಗಿದೆ ಎಂಬ ಬಗ್ಗೆಯೂ ಮಾಹಿತಿ ಪಡೆಯಲಾಯಿತು.

ಅಕ್ರಮ ಚಟುವಟಿಕೆಗಳಿಗೆ ನೇರವಾಗಿ ಅಥವಾ ಪರೋಕ್ಷವಾಗಿ ಬೆಂಬಲ ನೀಡುತ್ತಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿ ವಿರುದ್ಧ ಇದುವರೆಗೆ ಯಾವುದೇ ಇಲಾಖಾ ಅಥವಾ ಕಾನೂನು ಕ್ರಮ ಕೈಗೊಳ್ಳಲಾಗಿದೆಯೇ



ಎಂಬುದರ ಬಗ್ಗೆಯೂ ಸರ್ಕಾರದ ಗಮನ ಸೆಳೆಯಲಾಯಿತು.

ವಿಶೇಷವಾಗಿ ಯುವಜನರನ್ನು ಮಾದಕ ವ್ಯಸನ ಮತ್ತು ಆನ್‌ಲೈನ್ ಜೂಜಾಟದಂತಹ ಅಪಾಯಕಾರಿ ಚಟುವಟಿಕೆಗಳಿಂದ ದೂರವಿಡುವುದು ಅತ್ಯಂತ ಅಗತ್ಯವಾಗಿದ್ದು, ಸಿಂಧನೂರು ತಾಲೂಕಿನಲ್ಲಿ ಪೊಲೀಸ್ ಗಸ್ತು, ಗುಪ್ತಚರ ವ್ಯವಸ್ಥೆ ಹಾಗೂ ನಿಗಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಿ ಅಕ್ರಮ

3 ನೇ ಪುಟಕ್ಕೆ



## ದೇವರಾಜ ಅರಸು ಸಮಾನತೆಯ ಹರಿಕಾರ: ಕೆ.ವಿರುಪಾಕ್ಷಪ್ಪ

ಸಿಂಧನೂರು:

ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರ 111ನೇ ಜನ್ಮದಿನೋತ್ಸವವನ್ನು ಸಿಂಧನೂರಿನ ತಾಲೂಕು ಆಡಳಿತ ವತಿಯಿಂದ ಆಚರಿಸಿದರು ಈ ಸಂದರ್ಭದಲ್ಲಿ ಮಾಜಿ ಸಂಸದ ಕೆ. ವಿರುಪಾಕ್ಷಪ್ಪ ಅವರು ಶುಭಾಶಯಗಳನ್ನು ಕೋರಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ''ಇಡೀ ಭಾರತದಲ್ಲೇ ಮೊಟ್ಟಮೊದಲ ಬಾರಿಗೆ ಕರ್ನಾಟಕದ ಮುಖ್ಯಮಂತ್ರಿಯಾಗಿ ದೇವರಾಜ ಅರಸು ಅವರು ಮೀಸಲಾತಿಯನ್ನು ಜಾರಿಗೆ ತಂದು, ಸಾಮಾಜಿಕ ನ್ಯಾಯಕ್ಕೆ ಹೊಸ ದಿಕ್ಕನ್ನು ನೀಡಿದರು. ಶಿಕ್ಷಣ ಸೇರಿದಂತೆ ಸಮಾಜದ ಎಲ್ಲ ಕ್ಷೇತ್ರಗಳಲ್ಲೂ ಎಲ್ಲರೂ ಸಮಾನರು ಎಂಬ ತತ್ವವನ್ನು ಪ್ರತಿಪಾದಿಸಿದ ಮಹಾನ್ ನಾಯಕರು ಅವರು'' ಎಂದು ಹೇಳಿದರು.

ಹಿಂದುಳಿದವರು, ದಲಿತರು, ಬಡವರು ಹಾಗೂ ಶೋಷಿತ ವರ್ಗದ ಜನರಿಗೆ ಸಾಮಾಜಿಕ, ಶೈಕ್ಷಣಿಕ ಮತ್ತು ರಾಜಕೀಯವಾಗಿ ಸಮಾನ ಅವಕಾಶಗಳು ದೊರೆಯಬೇಕು ಎಂಬ ಉದ್ದೇಶದಿಂದ ದೇವರಾಜ ಅರಸು ಅವರು ಹಲವು ಮಹತ್ವದ ಯೋಜನೆಗಳು ಹಾಗೂ ಸುಧಾರಣೆಗಳನ್ನು ಜಾರಿಗೆ ತಂದಿದ್ದರು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಹಕ್ಕು ಮತ್ತು ಗೌರವ ದೊರಕಬೇಕು ಎಂಬ ಆಶಯದೊಂದಿಗೆ ಅವರು ತಮ್ಮ ಆಡಳಿತ ನಡೆಸಿದರು ಎಂದು ವಿರುಪಾಕ್ಷಪ್ಪ ತಿಳಿಸಿದರು.

3 ನೇ ಪುಟಕ್ಕೆ

## ಪ್ರಯೋಜಕತ್ವ ಯೋಜನೆಗೆ ಅನುಷ್ಠಾನಕ್ಕೆ ಕೈಜೋಡಿಸಿ ಶರಣಮ್ಮ ಕಾರನೂರು

ರಾಯಚೂರು,

ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಮಹಿಳಾ ಮತ್ತು ವಿಮಕ್ಕಳ ಅಭಿವೃದ್ಧಿ ಇಲಾಖೆ ಪೊಲೀಸ್ ಇಲಾಖೆ ಮಾರ್ಗದರ್ಶಿ ಸೊಸೈಟಿ, ಕಲಬುರ್ಗಿ ಹಾಗೂ ಡಾನ್ ಬಾಸ್ಕೋ ಸಮಾಜ ಸೇವಾ ಸಂಸ್ಥೆ ದೇವದುರ್ಗ ಇವರ ಸಯುಕ್ತ ಆಶ್ರಯದಲ್ಲಿ ಪೋಷಕತ್ವ ಯೋಜನೆ ಕಾನೂನಾತ್ಮಕ ದತ್ತು, ಬಾಲ್ಯ ವಿವಾಹ ನಿಷೇಧ ಮತ್ತು ಮಕ್ಕಳ ಹಕ್ಕುಗಳ ರಕ್ಷಣಾ ಕಾನೂನುಗಳ ಕುರಿತು ಒಂದು ದಿನದ ಕಾರ್ಯಾಗಾರವನ್ನು ಕೃಷಿ ವಿಜ್ಞಾನ ಕೇಂದ್ರ ಕೆ ವಿ ಕೆ ರಾಯಚೂರಿನಲ್ಲಿ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಉದ್ಘಾಟಕರಾಗಿ ಆಗಮಿಸಿ ಮಾತನಾಡಿದ ಇವರು ಸ್ಥಳೀಯ ಮಟ್ಟದಲ್ಲಿ ಪೋಷಕತ್ವ ಯೋಜನೆಯ ಅನುಷ್ಠಾನ ಮತ್ತು ಪಾಲುದಾರಿಕೆಯ ಮಹತ್ವ ಜವಾಬ್ದಾರಿಗಳನ್ನ ಹಾಗೂ ಮಕ್ಕಳ ರಕ್ಷಣಾ ಕಾನೂನುಗಳನ್ನ ತಾವೆಲ್ಲರೂ ಅರಿತುಕೊಂಡು ಮಕ್ಕಳ ಪಾಲನೆ ಪೋಷಣೆ ರಕ್ಷಣೆ ಮಾಡುವುದು ನಮ್ಮೆಲ್ಲರ ಪ್ರಮುಖ ಜವಾಬ್ದಾರಿಯಾಗಿದೆ. ಡಾನ್ ಬಾಸ್ಕೋ ಸಂಸ್ಥೆ ಮಕ್ಕಳಿಗಾಗಿ ಉತ್ತಮ ಕೆಲಸ ಕಾರ್ಯಗಳನ್ನು ಮಾಡುತ್ತಾ ಬಂದಿದ್ದು ಈ ಕಾರ್ಯಾಗಾರದಿಂದ ಬಾಲಕಾರ್ಮಿಕತೆ, ಬಾಲ್ಯ ವಿವಾಹ ಮಕ್ಕಳ ಪೋಷಣೆ ಪಾಲನೆ




ಅಗತ್ಯ ಇರುವ ಮಕ್ಕಳನ್ನು ಗುರುತಿಸಿ ಎಲ್ಲ ಮಕ್ಕಳನ್ನು ರಕ್ಷಣಾತ್ಮಕ ಕಾರ್ಯವನ್ನು ಮಾಡಿ ರಕ್ಷಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಶರಣಮ್ಮ ಕಾರನೂರು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಾಯಚೂರು ಇವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಇವರು ಮಕ್ಕಳ ಸರ್ವತೋಮುಖ ಅಭಿವೃದ್ಧಿಯಾಗಬೇಕಾದರೆ ಮಕ್ಕಳು ತಮ್ಮ ಹಕ್ಕುಗಳನ್ನು ಸರಿಯಾಗಿ ತಿಳಿದುಕೊಂಡು ನಾವೆಲ್ಲರೂ ಸ್ಥಳೀಯ ಮಟ್ಟದಲ್ಲಿ ನಮ್ಮ ನಮ್ಮ ಕೆಲಸ ಕಾರ್ಯಗಳಲ್ಲಿ ಮಕ್ಕಳ ರಕ್ಷಣಾತ್ಮಕ ಕಾರ್ಯಗಳನ್ನ ಅನುಷ್ಠಾನ ಮಾಡುತ್ತಾ ಮಕ್ಕಳ ಪೋಷಣೆಯ ಪಾಲನೆ ಅಗತ್ಯ ಇರುವ ಮಕ್ಕಳನ್ನು ಗುರುತಿಸಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ತಿಳಿಸಿ ನಾವೆಲ್ಲರೂ ಸೇರಿ ಮಕ್ಕಳ ಹಕ್ಕುಗಳನ್ನು ರಕ್ಷಿಸೋಣ ಎಂದು ಅಭಿವೃದ್ಧಿ ಯೋಜನೆ ಅಧಿಕಾರಿಗಳು ಗೆಲ್ಲೆಸೂಗೂರು ಇವರು ಮಾತನಾಡಿದರು.

200ವ ಅತಿಥಿಯಾಗಿ ಮಾತನಾಡಿದ ಇವರು ಕಾನೂನಿನ ಸಂಘರ್ಷ ಕೊಳ್ಳಲಾದ ಮಕ್ಕಳನ್ನು ಸುರಕ್ಷಿತವಾದ ವಾತಾವರಣ ಕಡೆ ನಾವೆಲ್ಲರೂ ಕರೆ ತರೋಣ ಯಾವುದೇ ಮಗು ಕಾನೂನು ರೀತಿಯಲ್ಲಿ ತಪ್ಪು ಮಾಡದ ಹಾಗೆ ನಾವೆಲ್ಲರೂ ಮುಂಜಾಗ್ರತ ಕ್ರಮಗಳನ್ನು ವಹಿಸಿ ಮಕ್ಕಳ ಮೇಲೆ ಅಂತಹ ತುರ್ತು ಪರಿಸ್ಥಿತಿ ಬಂದಂತ ಸಂದರ್ಭದಲ್ಲಿ112 1098 ಕರೆ ಮಾಡುವ ಮೂಲಕ ಮಕ್ಕಳ ರಕ್ಷಣಾತ್ಮಕ ಕಾರ್ಯಕ್ಕೆ ನಾವೆಲ್ಲರೂ ಕೈಜೋಡಿಸಬೇಕೆಂದು

3 ನೇ ಪುಟಕ್ಕೆ

## ಕನಿಷ್ಠ ವೇತನ ಜಾರಿಗೆ ಹಣಕಾಸು ಇಲಾಖೆ ನಿರ್ದೇಶನಕ್ಕೆ ಆಗ್ರಹಿಸಿ ಪ್ರತಿಭಟನೆ

ರಾಯಚೂರು, ಅ.20-

ಕನಿಷ್ಠ ವೇತನ ದರಗಳ ಪರಿಷ್ಕರಣೆಗೆ ಕಾರ್ಮಿಕ ಇಲಾಖೆ ಹೊರಡಿಸಲು ಅಧಿಸೂಚನೆಯಲ್ಲಿನ ಅಂಶಗಳು ಕೇಂದ್ರ ಸರ್ಕಾರದ ವೇತನ ಸಂಹಿತೆ 2019 ಅನುಗುಣವಾಗಿದೆ ಎಂಬುದರ ಕುರಿತು ಕೂಲಂಕುಶವಾಗಿ ಪರಿಶೀಲನೆ ನಡೆಸಿ, ಸಚಿವ ಸಂಪುಟ ಉಪ ಸಮಿತಿಯ ಅಧ್ಯಕ್ಷರು ಹಾಗೂ ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ ಅವರು ಅತೀ ಜರೂರು ಸಮಿತಿಯ ಸದಸ್ಯರ ಸಭೆ ಕರೆದು ಕಾರ್ಮಿಕರ ಹೊಸ ದರ ವೇತನವನ್ನು ಚರ್ಚೆಗೆ ತಂದು ಸಭೆಯಲ್ಲಿ ನಿರ್ಣಯವನ್ನು ಕೈಗೊಂಡು ಹಣಕಾಸಿನ ಇಲಾಖೆಗೆ ನಿರ್ದೇಶನ ನೀಡಬೇಕು ಎಂದು ಆಗ್ರಹಿಸಿ




ಕರ್ನಾಟಕ ದಲಿತ ಸಂಘರ್ಷ ಸಮಿತಿ ಮುಖಂಡರು ಇಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು. 2026-27ನೇ ಸಾಲಿನಲ್ಲಿ ಈಗಾಗಲೇ ಸಮಾಜ ಕಲ್ಯಾಣ ಇಲಾಖೆಯ ಜಿಲ್ಲೆಯ ವಸತಿ ನಿಲಯಗಳಲ್ಲಿ ಅಡುಗೆ ಆಳು, ಅಡುಗೆಯವರು, ಕಾವಲುಗಾರರು, ಕಂಪ್ಯೂಟರ್ ಆಪರೇಟರ್ ಮತ್ತು ಇನ್ನಿತರರು ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಿ ಕಾರ್ಮಿಕ ಇಲಾಖೆಯ ಹೊಸ ಆದೇಶ ವೇತನೆಯನ್ನು ಜಿಲ್ಲಾ ವ್ಯಾಪ್ತಿಯಲ್ಲಿ ವೇತನ ಪಡೆಯಲಾಗಿದೆ.ಏಕಾಏಕಿ ಕಾರ್ಮಿಕರ ಕನಿಷ್ಠ ವೇತನ ದರವನ್ನು ನೀಡುವಲ್ಲಿ ಹಣಕಾಸಿನ ಖಜಾನೆ ಇಲಾಖೆ ಯಿಂದ ಮಂಜೂರು ರದ್ದುಪಡಿಸು ವದರಿಂದ ಕಾರ್ಮಿಕರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸದನದಲ್ಲಿ ವಿಷಯ ವನ್ನು ಮಂಡಿಸಿ ಇದಕ್ಕೆ ಸಂಬಂಧಿಸಿದಂತೆ ಕನಿಷ್ಠ ವೇತನ ದರಗಳ ಪರಿಷ್ಕರಣ ಪರಿಶೀಲನಾ ಉಪ ಸಮಿತಿಯ ಅಧ್ಯಕ್ಷರು ಉಪಮುಖ್ಯಮಂತ್ರಿ ಇವರು ಕೂಡಲೇ ಸಮಿತಿಯ ಸದಸ್ಯರನ್ನು ಕರೆದು ಸಭೆಯಲ್ಲಿ ಕನಿಷ್ಠ ವೇತನ ದರಗಳ ಪರಿಷ್ಕರಣಗಳ ಬಗ್ಗೆ ಚರ್ಚಿಸಿ ಕೂಲಂಕುಶವಾಗಿ ಕಾರ್ಮಿ ಕರಿಗೆ ಹೊಸ ಕಾರ್ಮಿಕರ ವೇತನ ವನ್ನು ಮಂಜೂರು ಮಾಡಲು ನಿರ್ಣಯವನ್ನು ಕೈಗೊಂಡು, ಸಂಬಂಧಿಸಿದ ಇಲಾಖೆಗಳಿಗೆ ಸೂಕ್ತ ನಿರ್ದೇಶನ ನೀಡುವ ಮೂಲಕ ತಕ್ಷಣವೇ ಹಣಕಾಸು ಇಲಾಖೆ ನಿರ್ದೇಶನ ನೀಡಿ ಜಾರಿಗೊಳಿಸ ಬೇಕು ಎಂದು ಒತ್ತಾಯಿಸಿದರು.ಈ ಸಂದರ್ಭದಲ್ಲಿ ಎಂ. ಈರಣ್ಣ,ಲಕ್ಷ್ಮಿ ದೇವಿ, ಮಹದೇವಪ್ಪ, ನರಸಿಂಗಮ್ಮ ಸೇರಿದಂತೆ ಉಪಸ್ಥಿತರಿದ್ದರು.

## ಸಿರವಾರ: ಹೊಕ್ರಾಣಿ ಗ್ರಾಮದಲ್ಲಿ ದಲಿತ ಯುವತಿ ಶವವಾಗಿ ಪತ್ತೆ; ಅತ್ಯಾಚಾರವೆಸಗಿ ಹತ್ಯೆಗೈದ ಶಂಕೆ

ಸಿರವಾರ: ತಾಲೂಕಿನ ಹೊಕ್ರಾಣಿ ಗ್ರಾಮದಲ್ಲಿ ದಲಿತ ಯುವತಿಯೊಬ್ಬರನ್ನು ಅತ್ಯಾಚಾರವೆಸಗಿ ಹತ್ಯೆಗೈದು, ಶವವನ್ನು ಬಾವಿಗೆ ಎಸೆದಿರುವ ಶಂಕೆ ವ್ಯಕ್ತವಾಗಿದೆ.

ಮೃತ ಯುವತಿಯನ್ನು ಹೊಕ್ರಾಣಿ ಗ್ರಾಮದ ತಿಮ್ಮಾರೆಡ್ಡಿ ಅವರ ಪುತ್ರಿ ಅಶ್ವಿನಿ (18) ಎಂದು ಗುರುತಿಸಲಾಗಿದೆ. ಈಕೆ ಇತ್ತೀಚೆಷ್ಟೇ ಪದವಿ ಶಿಕ್ಷಣ ಪೂರ್ಣಗೊಳಿಸಿದ್ದಳು.

ಘಟನೆ ವಿವರ:ಬುಧವಾರ ಸಂಜೆ ಬಹಿರ್ದೆಸೆಗೆಂದು ತೆರಳಿದ್ದ ವೇಳೆ ಕಿಡಿಗೇಡಿಗಳು ಯುವತಿಯನ್ನು ಹಿಂಬಾಲಿಸಿ, ಅತ್ಯಾಚಾರ ಎಸಗಿ ಕೊಲೆ






ಮಾಡಿದ್ದು, ನಂತರ ಸಾಕ್ಷ್ಯ ಮರೆಮಾಚಲು ಶವವನ್ನು ಬಾವಿಗೆ ಎಸೆದು ಪರಾರಿಯಾಗಿದ್ದಾರೆ ಎಂದು ಶಂಕಿಸಲಾಗಿದೆ. ಕೃತ್ಯವೆಸೆದವರು ಯಾರೆಂಬುದು ಇನ್ನು ತಿಳಿದುಬಂದಿಲ್ಲ.

ಇಂದು ಬೆಳಿಗ್ಗೆ ಗ್ರಾಮದ ರೈತರು ಜಮೀನಿಗೆ ತೆರಳಿದಾಗ ಬಾವಿಯಲ್ಲಿ ಶವ ತೇಲುತ್ತಿರುವುದು ಕಂಡುಬಂದಿದೆ. ಕೂಡಲೇ ಗ್ರಾಮಸ್ಥರು ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸುದ್ದಿ ತಿಳಿದ ತಕ್ಷಣವೇ ಸಿರವಾರ ಪೊಲೀಸ್ ಠಾಣೆಯ ಅಧೀಕ್ಷಕರು ಹಾಗೂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಈ ಕುರಿತು ಸಿರವಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

## ಬಳ್ಳಾರಿ: ಆದಾಯ ತೆರಿಗೆ ಇಲಾಖೆಯ ತನಿಖಾ ವಿಭಾಗದ ನೂತನ ಕಚೇರಿ ಉದ್ಘಾಟನೆ

# ತೆರಿಗೆದಾರರಿಗೆ ಗೌರವ ನೀಡಿ, ಸಮಾಲೋಚಿಸಿ-ಭರತ್.ಆರ್




ಬಳ್ಳಾರಿ,ಆ.20-

ಉದ್ಯೋಗ ಸೃಷ್ಟಿಸಿ, ದೇಶದ ಮೂಲಸೌಕರ್ಯ ನಿರ್ಮಾಣಕ್ಕೆ ಕೊಡುಗೆ ನೀಡುವ ತೆರಿಗೆದಾರರನ್ನು ಗೌರವಯುತವಾಗಿ ಕಾಣುವುದು ಇಲಾಖೆಯ ಕರ್ತವ್ಯ. ಕಚೇರಿಗೆ ಬರುವ ತೆರಿಗೆದಾರರನ್ನು ಸೂಕ್ತ ಸೌಲಭ್ಯ, ಗೌರವ ನೀಡಿ ಸತ್ಕರಿಸಿ ವಹಿವಾಟುಗಳ ಕುರಿತು ಸಮಾಲೋಚಿಸಬೇಕು ಎಂದು ಹುಬ್ಬಳ್ಳಿ ವಿಭಾಗದ ಆದಾಯ ತೆರಿಗೆ (ತನಿಖೆ) ಇಲಾಖೆಯ ಜಂಟಿ ನಿರ್ದೇಶಕ ಭರತ್.ಆರ್ ಅವರು ಹೇಳಿದರು.

ನಗರದ ಇನ್ಫೆಂಟ್ರಿ ರಸ್ತೆಯ ನೇತಾಜಿ ನಗರದ ಕೆ.ಎಚ್.ಬಿ ಕಾಲೋನಿಯ (ವಾರ್ಡ್ ನಂ. 25) ಎ.ಬಿ.ಆರ್ ಕಾಂಪ್ಲೆಕ್ಸ್ ನ 3ನೇ ಮಹಡಿಯಲ್ಲಿ ನೂತನವಾಗಿ ಆರಂಭಗೊಂಡ ಆದಾಯ ತೆರಿಗೆ ತನಿಖಾ ವಿಭಾಗದ ನೂತನ ಕಚೇರಿಯನ್ನು ಬುಧವಾರ ಉದ್ಘಾಟಿಸಿ ಅವರು ಮಾತನಾಡಿದರು.

ಚಿತ್ರದುರ್ಗದಿಂದ ಬೀದರ್ ವರೆಗಿನ 12-13 ಜಿಲ್ಲೆಗಳ ಪೈಕಿ ಬಳ್ಳಾರಿಯು ಗರಿಷ್ಠ ಜಿಎಸ್‌ಟಿ ನೋಂದಣಿ ಹಾಗೂ ಅತಿ ಹೆಚ್ಚು ಬ್ಯಾಂಕಿಗ್ ವಹಿವಾಟು ಹೊಂದಿರುವ ಪ್ರಮುಖ ವಾಣಿಜ್ಯ ಕೇಂದ್ರವಾಗಿದೆ. ಇಲಾಖೆಯು ತೆರಿಗೆ ವ್ಯಾಪ್ತಿಯನ್ನು ವಿಸ್ತರಿಸಲು ನಡೆಸಿದ ಆಪರೇಷನ್ ನಡ್ಜ್ ಅಡಿಯಲ್ಲಿ ಬಳ್ಳಾರಿಯಲ್ಲೇ ಸುಮಾರು 40 ಜೆಡಿಎ ರಿಯಲ್ ಎಸ್ಟೇಟ್ ಯೋಜನೆಗಳನ್ನು ಗುರುತಿಸಲಾಗಿದೆ ಎಂದು ತಿಳಿಸಿದರು.

ಬಳ್ಳಾರಿ ವ್ಯಾಪ್ತಿಯೊಂದರಲ್ಲೇ ತೆರಿಗೆ ವಂಚನೆಗೆ ಸಂಬಧಿಸಿದತೆ 200ಕ್ಕೂ ಹೆಚ್ಚು ಅರ್ಜಿಗಳು/ದೂರುಗಳು ಬಂದಿದ್ದು, ಇತ್ತೀಚೆಗೆ 40 ಕಡತಗಳನ್ನು ವಿಲೇವಾರಿ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಬ್ಯಾಂಕ್ ವಹಿವಾಟುಗಳ ಆಳವಾದ ತನಿಖೆ ಹಾಗೂ ಅಗತ್ಯವಿದ್ದಲ್ಲಿ ಸರ್ವೆ/ದಾಳಿ ಕಾರ್ಯಾಚರಣೆಗಳು ಮುಂದುವರಿಯಲಿವೆ. ಸ್ಥಳೀಯ ಆರ್ಥಿಕ ಸ್ಥಿತಿಗತಿ ಹಾಗೂ ತೆರಿಗೆ ಸಂಗ್ರಹ ವೃದ್ಧಿಗಾಗಿ ಸಿಎ ಮತ್ತು ವೃತ್ತಿಪರರೊಂದಿಗೆ ನಿಯಮಿತವಾಗಿ ಸಂವಾದ ನಡೆಸಲು ಇಲಾಖೆ ನಿರ್ಧರಿಸಿದೆ ಎಂದು ತಿಳಿಸಿದರು.

ಬಳ್ಳಾರಿಯ ಆದಾಯ ತೆರಿಗೆ ಇಲಾಖೆಯ ಸಹಾಯಕ ನಿರ್ದೇಶಕ(ತನಿಖೆ) ಎ.ಪಿ. ವಿಜಯ್ ಚಂದ್ರ ಅವರು ಮಾತನಾಡಿ, ಸುಮಾರು 15 ರಿಂದ 20 ವರ್ಷಗಳ ಕಾಲ ಹಳೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕಚೇರಿಯು ಇದೀಗ ಸುಸಜ್ಜಿತ ನೂತನ ಕಟ್ಟಡಕ್ಕೆ ಸ್ಥಳಾಂತರಗೊಂಡಿದ್ದು, ನೂತನ ಹಾಗೂ ಸುಸಜ್ಜಿತ ಕಚೇರಿ ಕಾರ್ಯಾರಂಭಗೊಂಡಿರುವುದು ಸಿಬ್ಬಂದಿಯಲ್ಲಿ ಹೊಸ ಉತ್ಸಾಹ ಮೂಡಿಸಿದೆ. ಅಧಿಕಾರಿಗಳ ಮಾರ್ಗದರ್ಶನದಲ್ಲಿ ಸಾರ್ವಜನಿಕರಿಗೆ ಮತ್ತಷ್ಟು ಉತ್ತಮ ಸೇವೆ ಒದಗಿಸಲು ಬದ್ಧತೆ ಹೊಂದಲಾಗುವುದು ಎಂದು ಹೇಳಿದರು.

ಒಂದು ತಿಂಗಳ ಹಿಂದೆ ಬಳ್ಳಾರಿ ಕಚೇರಿಗೆ ಭೇಟಿ ನೀಡಿದ್ದ ಹಿರಿಯ ಅಧಿಕಾರಿಗಳು, ಹಳೆಯ ಕಟ್ಟಡದ ಸ್ಥಿತಿ ಗಮನಿಸಿ ತಕ್ಷಣವೇ ನೂತನ ಕಟ್ಟಡಕ್ಕೆ ಬದಲಾಯಿಸಲು ಸೂಚನೆ ನೀಡಿದ್ದರು. ನೂತನ ಕಚೇರಿಗೆ ಅಗತ್ಯವಿರುವ ಪೀಠೋಪಕರಣ ಹಾಗೂ ಮೂಲಸೌಕರ್ಯಗಳಿಗಾಗಿ ಪಿಡಿಐಟಿ ಮಟ್ಟದಲ್ಲಿ ನಿರಂತರ ಸಂಪರ್ಕ ಸಾಧಿಸಿ, ತ್ವರಿತವಾಗಿ ಅನುದಾನ ಒದಗಿಸುವಲ್ಲಿ ಇಲಾಖಾ ಮುಖ್ಯಸ್ಥರು ಮಹತ್ವದ ಪಾತ್ರ ವಹಿಸಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಹುಬ್ಬಳ್ಳಿ ವಿಭಾಗದ ಆದಾಯ ತೆರಿಗೆ (ತನಿಖೆ) ಇಲಾಖೆಯ ಸಹಾಯಕ ನಿರ್ದೇಶಕ ಕೆ.ಗೋಪಾಲ್ ಕೃಷ್ಣಮೂರ್ತಿ ಅವರು ಮಾತನಾಡಿ, ನೂತನ ಕಚೇರಿಯ ಮೂಲಕ ತನಿಖಾ ವಿಭಾಗವು ಮತ್ತಷ್ಟು ಚುರುಕಾಗಿ ಕಾರ್ಯನಿರ್ವಹಿಸಿ, ಮಹತ್ವದ ಪ್ರಕರಣಗಳನ್ನು ಯಶಸ್ವಿಯಾಗಿ ಭೇದಿಸಿ ಇಲಾಖೆಗೆ ಉತ್ತಮ ಹೆಸರು ತರಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ವಿಭಾಗದ ಆದಾಯ ತೆರಿಗೆ (ವೃತ್ತ- 1) ಇಲಾಖೆಯ ಸಹಾಯಕ ಆಯುಕ್ತ ಡಿ.ಪಾಂಡುರಗ, ಬಳ್ಳಾರಿ ವಿಭಾಗದ ಆದಾಯ ತೆರಿಗೆ (ಮುಖ್ಯ ವೃತ್ತ) ಇಲಾಖೆಯ ಸಹಾಯಕ ಆಯುಕ್ತ ಬಿ.ಜೆ.ರವಿ ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ ಹಾಗೂ ಸಿಎ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಮಾಜಿ ಸಚಿವ ಬಿ.ಸಿ.ನಾಗೇಶ್ ನಿಧನಕ್ಕೆ ಬಿಜೆಪಿ ಜಿಲ್ಲಾ ಘಟಕದಿಂದ ಸಂತಾಪ




ಕಲಬುರಗಿ,ಆ.20-

ಮಾಜಿ ಶಿಕ್ಷಣ ಸಚಿವ ಹಾಗೂ ಬಿಜೆಪಿ ಹಿರಿಯ ಮುಖಂಡ ಬಿ.ಸಿ. ನಾಗೇಶ್ ಅವರ ನಿಧನಕ್ಕೆ ಭಾರತೀಯ ಜನತಾ ಪಕ್ಷದ ಕಲಬುರಗಿ ಜಿಲ್ಲಾ ಘಟಕ ಸಂತಾಪ ಸೂಚಿಸಿತು.

ನಗರದಲ್ಲಿ ನಡೆಯುತ್ತಿರುವ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ವಿರೋಧಿ ಅಹೋರಾತ್ರಿ ಧರಣಿ ಸತ್ಯಾಗ್ರಹದ ಸಂದರ್ಭದಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಬಿ.ಸಿ. ನಾಗೇಶ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಶ್ರದ್ಧಾಂಜಲಿ ಅರ್ಪಿಸಿದರು.

ಈ ವೇಳೆ ಮುಖಂಡರು, ರಾಜ್ಯದ ಶಿಕ್ಷಣ ಕ್ಷೇತ್ರಕ್ಕೆ ಬಿ.ಸಿ. ನಾಗೇಶ್ ಅವರು ನೀಡಿದ ಕೊಡುಗೆಗಳನ್ನು ಸ್ಮರಿಸಿದರು. ಅವರ ಅಗಲಿಕೆ ಪಕ್ಷ ಹಾಗೂ ಸಾರ್ವಜನಿಕ ಜೀವನಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಸಂತಾಪ ವ್ಯಕ್ತಪಡಿಸಿದರು.

ಇದೇ ವೇಳೆ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ದುರುಪಯೋಗದ ಆರೋಪಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಜಿಲ್ಲಾ ಘಟಕ ನಡೆಸುತ್ತಿರುವ ಪ್ರತಿಭಟನೆ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ.

ಪ್ರತಿಭಟನೆಯಲ್ಲಿ ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ ಬಗಲಿ,ಬಿಜೆಪಿ ನಗರ ಅಧ್ಯಕ್ಷ ಚಂದು ಪಾಟೀಲ,ಮಾಜಿ ಶಾಸಕ ರಾಜಕುಮಾರ ಪಾಟೀಲ ತೆಲ್ಕೂರ, ಸಹ ಪ್ರಭಾರಿ ಶರಣಪ್ಪ ತಳವಾರ, ಆಳಂದ ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ ಕಂದಗೂಳೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಬಿರಾದಾರ, ಬಸವರಾಜ ಬೆಣ್ಣೂರ್ಕರ್, ಶೋಭಾ ಬಾಣಿ, ಉಮೇಶ ಪಾಟೀಲ, ಶಿವಯೋಗಿ ನಾಗನಹಳ್ಳಿ, ಮಹಿಳಾ ಮೋರ್ಚಾ ಅಧ್ಯಕ್ಷೆ ಗೌರಿ ಚಿಚಕೋಟಿ, ಸಂಜಯ್ ಮಿಸ್ಕಿನ್, ಜಿಲ್ಲಾ ಉಪಾಧ್ಯಕ್ಷ ಶ್ರೀಶೈಲ ಪಾಟೀಲ, ಸಂತೋಷ ಗಡಂತಿ, ಹಣಮಂತರಾವ್ ಮಾಲಾಜಿ, ಸಂತೋಷ ಹಾದಿಮನಿ, ಸೀತಾರಾಮ ಜಮಾದಾರ, ಪ್ರಕಾಶ ಮಾನೆ ಉಪಸ್ಥಿತರಿದ್ದರು.

## ತೋರಣಗಲ್ಲು ಸಮುದಾಯ ಆರೋಗ್ಯ ಕೇಂದ್ರಕ್ಕೆ ಡಿಎಚ್‌ಒ ಡಾ.ಅಲಕಾನಂದ ಮಳಗಿ ದಿಢೀರ್ ಭೇಟಿ: ವೈದ್ಯರು, ಸಿಬ್ಬಂದಿಗೆ ಖಡಕ್ ಸೂಚನೆ



ಬಳ್ಳಾರಿ,ಆ.20-

ಸಂಡೂರು ತಾಲೂಕಿನ ತೋರಣಗಲ್ಲು ಸಮುದಾಯ ಆರೋಗ್ಯ ಕೇಂದ್ರಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಅಲಕಾನಂದ ಡಿ. ಮಳಗಿ ಅವರು ಮಂಗಳವಾರ ಭೇಟಿ ನೀಡಿ, ಆಸ್ಪತ್ರೆಯ ವೈದ್ಯಕೀಯ ಸೇವೆಗಳು ಹಾಗೂ ಸಾರ್ವಜನಿಕರಿಗೆ ಸಿಗುತ್ತಿರುವ ಚಿಕಿತ್ಸಾ ಸೌಲಭ್ಯಗಳ ಪರಿಶೀಲನೆ ನಡೆಸಿದರು.

ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಗಳೊಂದಿಗೆ ಸುದೀರ್ಘ ಚರ್ಚೆ ನಡೆಸಿದ ಅವರು, ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ನಿಟ್ಟನಲ್ಲಿ ಸಿಬ್ಬಂದಿಗೆ ಹಲವು ಪ್ರಮುಖ ನಿರ್ದೇಶನಗಳನ್ನು ನೀಡಿದರು.

ಎಲ್ಲ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ನಿಗದಿತ ಸಮಯಕ್ಕೆ ಸಮವಸ್ತ ಧರಿಸಿ ಕರ್ತವ್ಯಕ್ಕೆ ಹಾಜರಾಗಬೇಕು. ಆಸ್ಪತ್ರೆಗೆ ಬರುವ ರೋಗಿಗಳು ಮತ್ತು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ತಿಳಿಸಿದರು.

ತಾಯಿ-ಮಕ್ಕಳ ಆರೋಗ್ಯ ಕಾರ್ಯಕ್ರಮದಡಿ ಅಗತ್ಯ ಔಷಧಗಳು, ಲಸಿಕೆಗಳು ಹಾಗೂ ವಿಶೇಷವಾಗಿ ನಾಯಿ ಕಡಿತ ಮತ್ತು ಹಾವು ಕಡಿತಕ್ಕೆ ನೀಡುವ ಜೀವರಕ್ಷಕ ಔಷಧಗಳನ್ನು ಆಸ್ಪತ್ರೆಯಲ್ಲಿ ಸದಾ ದಾಸ್ತಾನು ಇರಿಸಿಕೊಳ್ಳಬೇಕು. ಕ್ಷಯರೋಗ, ಕುಷ್ಠರೋಗ, ಡೆಂಗ್ಯೂ, ಚಿಕೂನ್‌ಗುನ್ಯಾ, ಮೆದುಳು ಜ್ವರದಂತಹ ಸಾಂಕ್ರಾಮಿಕ ರೋಗಗಳು ಹಾಗೂ ಅಸಾಂಕ್ರಾಮಿಕ ರೋಗಗಳ ತಡೆಗೆ ಕ್ಷೇತ್ರ ಸಿಬ್ಬಂದಿ ಮೂಲಕ ನಿರಂತರ ಜಾಗೃತಿ ಮೂಡಿಸಬೇಕು ಎಂದು ಸೂಚಿಸಿದರು.

ಮಳೆಗಾಲ ಹಿನ್ನೆಲೆಯಲ್ಲಿ ಮನೆ ಸುತ್ತಮುತ್ತ ನೀರು ನಿಲ್ಲದಂತೆ ಸ್ವಚ್ಛತೆ ಕಾಪಾಡಿಕೊಳ್ಳಲು ಹಾಗೂ ಸೊಳ್ಳೆಗಳ ಉತ್ಪತ್ತಿ ತಡೆಯಲು ಗ್ರಾಮ ಮಟ್ಟದಲ್ಲಿ ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದರು.

ಇದೇ ವೇಳೆ ಹೆರಿಗೆ ಕೊಠಡಿಗೆ ಭೇಟಿ ನೀಡಿ ಪರಿಶೀಲಿಸಿದ ಅವರು, ಪ್ರತಿಯೊಂದು ನವಜಾತ ಮಗುವಿಗೆ ಸಮಯಕ್ಕೆ ಸರಿಯಾಗಿ ಲಸಿಕೆ ನೀಡಬೇಕು ಮತ್ತು ಬಾಣಂತಿಯರಿಗೆ ಕಬ್ಬಿಣಾಂಶ (ಐರನ್) ಹಾಗೂ ಕ್ಯಾಲ್ಸಿಯಂ ಮಾತ್ರೆಗಳನ್ನು ಕಡ್ಡಾಯವಾಗಿ ವಿತರಿಸಬೇಕು ಎಂದರು.

ಇದೇ ವೇಳೆ ಆಸ್ಪತ್ರೆಯ ವಿವಿಧ ವಾರ್ಡ್‌ಗಳು, ಔಷಧ ಕೊಠಡಿ, ಪ್ರಯೋಗಾಲಯ (ಲ್ಯಾಬ್) ಹಾಗೂ ಪ್ರಮುಖ ದಾಖಲೆಗಳನ್ನು ಪರಿಶೀಲಿಸಿದ ಅವರು, ಸಾರ್ವಜನಿಕರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ತಾಲೂಕು ಆರೋಗ್ಯ ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಸಂಡೂರು ತಾಲೂಕು ಆರೋಗ್ಯ ಅಧಿಕಾರಿ ಡಾ. ಹರೀಶ್, ಆಡಳಿತ ವೈದ್ಯಾಧಿಕಾರಿ ಡಾ. ಗೋಪಾಲರಾವ್, ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಚಳ್ಳಾರಿ ಗ್ರಾಮದ ಕೆರೆ ಪುನಶ್ಚೇತನ ಕಾಮಗಾರಿ ಸ್ಥಳದಲ್ಲಿ ಕೂಲಿಕಾರರಿಗೆ ಆರೋಗ್ಯ ತಪಾಸಣೆ

# ಕೂಲಿ ಕೆಲಸದೊಂದಿಗೆ ವಿಮೆ ನೋಂದಣಿ ಮಾಡಿಕೊಳ್ಳಿ: ಸೌಮ್ಯ



ಕೊಪ್ಪಳ ಆ.20-

ಪ್ರತಿಯೊಬ್ಬ ಕೂಲಿಕಾರರು ಕೂಲಿ ಕೆಲಸದೊಂದಿಗೆ ವಿವಿಧ ವಿಮಾ ಯೋಜನೆಗಳಿಗೆ ನೋಂದಣಿ ಮಾಡಿಕೊಳ್ಳಬೇಕು ಎಂದು ಕೊಪ್ಪಳ ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕಿ ಕೆ.ಸೌಮ್ಯ ಅವರು ಕರೆ ನೀಡಿದರು.

ಕೊಪ್ಪಳ ತಾಲೂಕಿನ ಚಿಕ್ಕಬೊಮ್ಮನಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಳ್ಳಾರಿ ಗ್ರಾಮದಲ್ಲಿ ಆ.19ರಂದು ವಿಬಿಜಿ ರಾಮ್‌ಜೀ ಯೋಜನೆಯಡಿ ನಡೆಯುತ್ತಿರುವ ಕೆರೆ ಪುನಶ್ಚೇತನ ಕಾಮಗಾರಿ ಸ್ಥಳದಲ್ಲಿ ಕೂಲಿಕಾರರಿಗೆ ಆಯೋಜಿಸಿದ್ದ ಆರೋಗ್ಯ ತಪಾಸಣಾ ಶಿಬಿರದಲ್ಲಿ ಅವರು ಮಾತನಾಡಿದರು.

ವಿಬಿಜಿ ರಾಮ್‌ಜೀ ಯೋಜನೆಯು ಗ್ರಾಮೀಣ ಭಾಗದ ಕೂಲಿಕಾರರು ಗುಳೆ ಹೋಗುವುದನ್ನು ತಡೆದು, ಪ್ರತಿ ಕುಟುಂಬಕ್ಕೆ ಸ್ಥಳೀಯವಾಗಿ 125 ದಿನಗಳ ಕೂಲಿ ಕೆಲಸ ಒದಗಿಸುವ ಉದ್ದೇಶ ಹೊಂದಿದೆ. ಯೋಜನೆಯಡಿ ಪುರುಷರು ಮತ್ತು ಮಹಿಳೆಯರಿಗೆ ಸಮಾನ ಕೂಲಿ ನಿಗದಿಪಡಿಸಲಾಗಿದೆ. ಜಲ ಸಂರಕ್ಷಣೆ, ನೀರಾವರಿ, ಅಂತರ್ಜಲ ಮರುಪೂರಣ, ಜಲಾನಯನ ಪ್ರದೇಶಗಳ ಅಭಿವೃದ್ಧಿ ಹಾಗೂ ಜಲಮೂಲಗಳ ಪುನಶ್ಚೇತನಕ್ಕೆ ಆದ್ಯತೆ ನೀಡಲಾಗಿದೆ. ವಿಕಸಿತ ಗ್ರಾಮ ಪಂಚಾಯಿತಿಯಿಂದ ವಿಕಸಿತ ಭಾರತದೆಡೆಗೆ ಸಾಗುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ ಎಂದರು.

ಪ್ರಸ್ತುತ ಪ್ರತಿ ಮಾನವ ದಿನಕ್ಕೆ ರೂ. 382 ಕೂಲಿ ನಿಗದಿಪಡಿಸಲಾಗಿದ್ದು, ಕೂಲಿಕಾರರು ಅಳತೆಗೆ ಅನುಗುಣವಾಗಿ ಕೆಲಸ ನಿರ್ವಹಿಸಬೇಕು. ಕೆಲಸದ ಅಳತೆಗೆ ಅನುಗುಣವಾಗಿ ಕೂಲಿ ಹಣ ಪಾವತಿಸಲಾಗುತ್ತದೆ ಎಂದು ಸೌಮ್ಯ ತಿಳಿಸಿದರು.

ತಾಲೂಕು ಐಇಸಿ ಸಂಯೋಜಕ ದೇವರಾಜ ಪತ್ತಾರ ಮಾತನಾಡಿ, ಯೋಜನೆಯಡಿ ವೈಯಕ್ತಿಕ ಕಾಮಗಾರಿಗಳಾದ ಜಾನುವಾರು ಶೆಡ್, ಮೇಕೆ ಶೆಡ್, ಕೃಷಿಹೊಂಡ, ಬದು ನಿರ್ಮಾಣ, ಕೋಳಿ ಶೆಡ್ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿದೆ. ಈ ಅ ವ ' ಕ ಾ ಶ ' ವ ' ನ ' ್ನ ಸದುಪಯೋಗಪಡಿಸಿಕೊಂಡು 125 ದಿನಗಳ ಕೆಲಸ ನಿರ್ವಹಿಸಬೇಕು ಎಂದು ಹೇಳಿದರು.

ಜಮೀನು ಇಲ್ಲದವರು ಗ್ರಾಮ ಪಂಚಾಯಿತಿಯಿಂದ ಕೈಗೊಳ್ಳುವ ಸಾಮೂಹಿಕ ಕಾಮಗಾರಿಗಳಲ್ಲಿ ಕೂಲಿ ಕೆಲಸ ನಿರ್ವಹಿಸಿ, ಆದಾಯಗಳಿಸುವ ಮೂಲಕ ಆರ್ಥಿಕವಾಗಿ ಸಬಲರಾಗಬೇಕು. ಹೊಸದಾಗಿ ನೋಂದಣಿಯಾದ ಕುಟುಂಬಗಳಿಗೆ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಿಸಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಂದಿಗಲ್ಲಪ್ಪ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗವಿಸಿದ್ದಯ್ಯ, ಆರೋಗ್ಯ ಇಲಾಖೆಯ ಸಿಬ್ಬಂದಿ, ಡಿಇಒ ಹುಲಗಪ್ಪ, ಗ್ರಾಮಸ್ಥರಾದ ಅಲ್ಲಾಭಕ್ಷಿ, ಗ್ರಾಮ ಕಾಯಕ ಮಿತ್ರ ಪವಿತ್ರಾ, ಕಾಯಕ ಬಂಧುಗಳು ಹಾಗೂ ಕೂಲಿಕಾರರು ಉಪಸ್ಥಿತರಿದ್ದರು.

## ಬಳ್ಳಾರಿಯಲ್ಲಿ ನಶಾಮುಕ್ತ ಭಾರತ ಅಭಿಯಾನ

# 8,500ಕ್ಕೂ ಹೆಚ್ಚು ವಿದ್ಯಾರ್ಥಿಗಳಿಂದ ಮಾದಕ ದ್ರವ್ಯ ವಿರೋಧಿ ಪ್ರತಿಜ್ಞಾವಿಧಿ ಸ್ವೀಕಾರ




ಬಳ್ಳಾರಿ,ಆ.20-

ಕೇಂದ್ರ ಸರ್ಕಾರದ ನಶಾಮುಕ್ತ ಭಾರತ ಅಭಿಯಾನ' ಯೋಜನೆಯ ಅಂಗವಾಗಿ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಹಾಗೂ ಮೈತ್ರಿ ವ್ಯಸನ ಮುಕ್ತ ಕೇಂದ್ರದ ಸಂಯುಕ್ತಾಶ್ರಯದಲ್ಲಿ 6ನೇ ಮಾದಕ ದ್ರವ್ಯ ಸೇವನೆ ವಿರೋಧಿ ದಿನವನ್ನು ಮಂಗಳವಾರದದು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ಜಾಗೃತಿ ಅಭಿಯಾನದ ಅಂಗವಾಗಿ ನಗರದ ವಿವಿಧ ಕಾಲೇಜುಗಳು ಮತ್ತು ಪ್ರೌಢಶಾಲೆಗಳಲ್ಲಿ ಮಾದಕ ದ್ರವ್ಯ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಯುವಜನರಲ್ಲಿ ಜಾಗೃತಿ ಮೂಡಿಸಿ, ಸಾಮೂಹಿಕ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀಮತಿ ಗಾಲಿ ರುಕ್ಮಿಣಮ್ಮ ಚೆಂಗಾರೆಡ್ಡಿ ಸ್ಮಾರಕ ಸರ್ಕಾರಿ ವಾಣಿಜ್ಯ ನಿರ್ವಹಣಾ ಕಾಲೇಜು, ಮೊಹಮ್ಮದಿಯ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು, ವೀರಶೈವ ವಿದ್ಯಾವರ್ಧಕ ಸಂಘದ ಕಾಲೇಜು, ವಾರ್ಡ್ಲಾ ಪದವಿ ಪೂರ್ವ ಕಾಲೇಜು, ಸೈಂಟ್ ಜೋಸೆಫ್ ಕಾಲೇಜು, ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಪದವಿ ಕಾಲೇಜು, ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಹಾಗೂ ಅಲ್ಲಂ ಸುಮಂಗಳಮ್ಮ ಮಹಿಳಾ ಕಾಲೇಜು ಸೇರಿದಂತೆ ನಗರದ ವಿವಿಧ ಶಿಕ್ಷಣ ಸಂಸ್ಥೆಗಳ ಸುಮಾರು 8,500ಕ್ಕೂ ಅಧಿಕ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಿ ಏಕಕಾಲದಲ್ಲಿ ಪ್ರತಿಜ್ಞೆ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗೋವಿಂದಪ್ಪ ಹೆಚ್.ಎಂ., ಕಾಲೇಜಿನ ಪ್ರಾಚಾರ್ಯ ಡಾ. ರಾಮಕೃಷ್ಣ,

ರಾಜೇಶ್ವರಿ ಪಾಟೀಲ್, ಮುಖಂಡರಾದ ಮೊಹಮ್ಮದ್ ಮುಜಾಮಿಲ್, ಡಿ.ಡಿ.ಆರ್.ಸಿ ನೋಡಲ್ ಅಧಿಕಾರಿ ನಾಗೇಂದ್ರ, ಜಿಲ್ಲಾ ಸಂಯೋಜಕ ಟೇಕರಾಜ್, ಎಂ.ಆರ್.ಡಬ್ಲ್ಯೂ ರಾಣಿ ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿಗಳು ಉಪಸ್ಥಿತರಿದ್ದರು.



## ಕುರುಗೋಡು: ಶುಚಿ ಯೋಜನೆಯಡಿ ಮುಟ್ಟಿನ ಕಪ್ ವಿತರಣೆ ಹಾಗೂ ಜಾಗೃತಿ ಕಾರ್ಯಕ್ರಮ

ಬಳ್ಳಾರಿ,ಆ.20-

ಕೇಂದ್ರ ಮತ್ತು ರಾಜ್ಯ ಸರ್ಕಾರ, ರಾಷ್ಟಿಯ ಆರೋಗ್ಯ ಅಭಿಯಾನ, ಆರ್.ಬಿ.ಎಸ್.ಕೆ/ಆರ್.ಕೆ.ಎಸ್.ಕೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಳ್ಳಾರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಶುಚಿ ಯೋಜನೆಯಡಿ ಪ್ರೇರಣಾ ಮುಟ್ಟಿನ ಕಪ್ ವಿತರಣೆ ಹಾಗೂ ಋತುಚಕ್ರದ ಆರೋಗ್ಯ ಮತ್ತು ನೈರ್ಮಲ್ಯ ಜಾಗೃತಿ ಕಾರ್ಯಕ್ರಮವನ್ನು ಕುರುಗೋಡಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿತ್ತು.

ಕುರುಗೋಡು ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ, ಓರ್ವಾಯಿ ಪ್ರಾಥಮಿಕ ಆರೋಗ್ಯ ಕೇಂದ್ರ, ಕುರುಗೋಡು ಸಮುದಾಯ ಆರೋಗ್ಯ ಕೇಂದ್ರ ಹಾಗೂ ನಮ್ಮ ಕ್ಲಿನಿಕ್ ಸಹಯೋಗದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಮಹಿಳೆಯರಲ್ಲಿ ಋತುಚಕ್ರದ ನೈರ್ಮಲ್ಯ ಹಾಗೂ ಮುಟ್ಟಿನ ಕಪ್ ಬಳಕೆಯ ಪ್ರಯೋಜನಗಳ ಕುರಿತು ಸಮಗ್ರ ಮಾಹಿತಿ ನೀಡಿ, ಜಾಗೃತಿ ಮೂಡಿಸಲಾಯಿತು. ಮುಟ್ಟಿನ ಕಪ್ ಬಳಕೆಯನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಸಮುದಾಯ ಆರೋಗ್ಯ ಕೇಂದ್ರದ ಮಹಿಳಾ ಸಿಬ್ಬಂದಿ, ಕಚೇರಿ ಅಧಿಕಾರಿಗಳು, ಶುಶ್ರೂಷಣಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು ಹಾಗೂ ಆಶಾ ಕಾರ್ಯಕರ್ತೆಯರಿಗೆ ಒಟ್ಟು 98 ಮುಟ್ಟಿನ ಕಪ್‌ಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಆರ್.ಕೆ.ಎಸ್.ಕೆ. ಸಂಯೋಜಕ ಕೆ.ಎನ್.ಎಂ. ಮನೋಹರ್, ದಂತ ವೈದ್ಯಾಧಿಕಾರಿ ಡಾ. ಗಾಯತ್ರಿ, ನೇತ್ರಾಧಿಕಾರಿ ಜಿ. ಪಲ್ಲವಿ, ಹಿರಿಯ ಶುಶ್ರೂಷಣಾಧಿಕಾರಿ ಕೆ.ಬಿ. ಸರಸ್ವತಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕೆ. ಮಂಜುನಾಥ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಷಡಕ್ಷರಯ್ಯ ಮತ್ತು ಮಹೇಂದ್ರ ಕುಮಾರ್ ಪ್ರಭಾರಿ ಎಲ್.ಹೆಚ್.ವಿ. ಕೆ. ನೀಲಾವತಿ ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳಾದ ಡಿ. ಸುನೀತಾ, ರೇಣುಕಾ, ಗಿರಿಜಾ, ಜಯಶ್ರೀ ಸೇರಿದಂತೆ ಇತರ ಆರೋಗ್ಯ ಸಿಬ್ಬಂದಿ ಉಪಸ್ಥಿತರಿದ್ದರು.

## ಸೆ. 12 ರಂದು ಜಿಲ್ಲೆಯಾದ್ಯಂತ ರಾಷ್ಟ್ರೀಯ ಲೋಕ್ ಅದಾಲತ್

# ರಾಜೀಯಾಗಬಲ್ಲ ಪ್ರಕರಣಗಳ ಸುಲಭ ಇತ್ಯರ್ಥಕ್ಕೆ ಅವಕಾಶ: ನ್ಯಾ. ಮಹಾಂತೇಶ ದರಗದ

ಕೊಪ್ಪಳ ಆ.20-

ಸೆಪ್ಟೆಂಬರ್ 12 ರಂದು ಕೊಪ್ಪಳ ಜಿಲ್ಲೆಯಾದ್ಯಂತ ಹಮ್ಮಿಕೊಂಡಿರುವ ''ರಾಷ್ಟ್ರೀಯ ಲೋಕ್ ಅದಾಲತ್'' ಕಾರ್ಯಕ್ರಮದಲ್ಲಿ ರಾಜೀ ಆಗಬಹುದಾದ ಎಲ್ಲಾ ತರಹದ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಹೇಳಿದರು.

ಅವರು ಮಂಗಳವಾರದಂದು ಕೊಪ್ಪಳ ಜಿಲ್ಲಾ ನ್ಯಾಯಾಲಯದ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳ ಕಚೇರಿ ಸಭಾಂಗಣದಲ್ಲಿ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೊಪ್ಪಳ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಸೆ.12 ರಂದು ರಾಷ್ಟ್ರೀಯ ಲೋಕ್ ಅದಾಲತ್ ನಡೆಯಲಿದ್ದು, ಜಿಲ್ಲೆಯ ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ತಕ್ಷಣ ಪರಿಹಾರ ಪಡೆದುಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ. ಯಾವುದೇ ಖರ್ಚು ಇಲ್ಲದೇ ಶೀಘ್ರ ತೀರ್ಮಾನಕ್ಕಾಗಿ ಲೋಕ್ ಅದಾಲತ್ ಒಂದು ವಿಶೇಷ ಅವಕಾಶವಾಗಿದೆ. ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ದಾವೆದಾರರು ಹಾಗೂ ಕಕ್ಷಿದಾರರು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಭಾಗವಹಿಸಿ ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದರು.

ವ್ಯಾಜ್ಯ ಪೂರ್ವ ಪ್ರಕರಣಗಳಾದ ಚೆಕ್ ಅಮಾನ್ಯದ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಇತರ ಪ್ರಕರಣಗಳಾದ ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಮತ್ತು ಇತರ ಸಿವಿಲ್ ಪ್ರಕರಣಗಳು, ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರಕ್ಕೆ ಸಂಬಂಧಪಟ್ಟ ಪ್ರಕರಣಗಳು (ಆರ್.ಇ.ಆರ್.ಎ), ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಸಾಲ ವಸೂಲಾತಿ, ನ್ಯಾಯಾಧೀಕರಣದ ಪ್ರಕರಣಗಳು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ, ಖಾಯಂ ಜನತಾ ನ್ಯಾಯಾಲಯದಲ್ಲಿನ ಪ್ರಕರಣಗಳು ಮತ್ತು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳಾದ ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು, ಚೆಕ್ ಅಮಾನ್ಯದ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ವೈವಾಹಿಕ ಪ್ರಕರಣಗಳು, ಭೂಸ್ವಾಧೀನ ಪ್ರಕರಣಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು ಹಾಗೂ ಪಿಂಚಣಿ ಪ್ರಕರಣಗಳು, ಕಂದಾಯ ಪ್ರಕರಣಗಳು ರಾಜೀಯಾಗಬಲ್ಲ ಸಿವಿಲ್ ಮತ್ತು ಇತರೆ ಪ್ರಕರಣಗಳನ್ನು ಈ ಲೋಕ ಅದಾಲತ್‌ನಲ್ಲಿ ರಾಜೀ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಹೇಳಿದರು.

ನ್ಯಾಯಾಲಯಗಳಲ್ಲಿ ಉಭಯ ಪಕ್ಷಗಾರರು ರಾಜೀ ಮಾಡಿಕೊಳ್ಳಲು ಸೂಕ್ತ ಮಾರ್ಗದರ್ಶನ ನೀಡಲಾಗುವುದು. ಇಬ್ಬರಿಗೂ ಒಪ್ಪಿಗೆಯಾಗುವಂತೆ ಪ್ರಕರಣವು ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದಗಳು ತೀರ್ಮಾನವಾಗುತ್ತದೆ. ರಾಜೀ ಸಂಧಾನದಲ್ಲಿ ಯಾವುದೇ ವ್ಯಕ್ತಿಗಳಿಗೆ ಸೋಲು ಇರುವುದಿಲ್ಲ. ಇಬ್ಬರಿಗೂ ಗೆಲುವಿನಲ್ಲಿರಲು ಸಾಧ್ಯವಾಗುವುದರ ಜೊತೆಗೆ ಸಂಬಂಧಗಳನ್ನು ಒಳ್ಳೆಯ ರೀತಿಯಲ್ಲಿಡಲು ಸಾಧ್ಯವಾಗುತ್ತದೆ. ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

## ಒಂದನೇಯ ಪುಟದಿಂದ

### ಖರ್ಗೆ ಭಾಷಣದ ಸ್ಥಳ ಶುದ್ಧೀಕರಣ ಖಂಡಿಸಿ ಬಲಗೈ ಜಾತಿಗಳ ಒಕ್ಕೂಟದಿಂದ ಪ್ರತಿಭಟನೆ

# ಮುಂದೆ ಇಂತಹ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಿ. ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ.ಡಾ.ರಾಮಣ್ಣ ಗೋನವಾರ್

ಎಂದರೆ ತಪ್ಪಾಗಲಾರದು ಆದರೆ ಕೆಲವು ಮನುವಾದಿಗಳು ಅನ್ನಿಸಿಕೊಂಡವರು, ಜಾತಿ ವಾದಿಗಳು, ಪ್ರಜಾ ಪ್ರಭುತ್ವ ವಿರೋಧಿಗಳು ಈ ಸ್ಥಳವನ್ನು ಗೋಮೂತ್ರ ಹಾಕಿ ಶುದ್ದೀಕರಣ ಮಾಡಿ ಅಲ್ಲಿ ಹೊಮ ಹವನಗಳನ್ನು ನಡೆಸುತ್ತಾರೆ ಎಂತಹ ನಾಚಿಕೆಯ ವಿಷಯವಾಗಿದೆ.

ಭಾರತೀಯರೆಲ್ಲರೂ ಇದನ್ನು ಒಂದಾಗಿ ಖಂಡಿಸಬೇಕಾಗುತ್ತದೆ. ಅದಕ್ಕಾಗಿ ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟ (ರಿ) ತಾಲೂಕ ಸಮಿತಿ ಸಿಂಧನೂರು ಜಿಲ್ಲಾ ರಾಯಚೂರು ಕರ್ನಾಟಕ ಈ ಘಟನೆಯನ್ನು ತೀವ್ರವಾಗಿ ಖಂಡಿಸುತ್ತಾ, ಇಂತಹ ಘಟನಾವಳಿಗಳು ಪುನರ್ ಜರುಗದಂತೆ ಸೂಕ್ತ ಕ್ರಮ ಜರುಗಿಸಬೇಕು, ಇಲ್ಲವಾದಲ್ಲಿ ದೇಶದಲ್ಲಿ ಶಾಂತಿ, ನೆಮ್ಮದಿ ಹಾಳಾಗಿ ಹೋಗುತ್ತದೆ. ಇದು ಮರುಕಳಿಸಬಾರದು. ಎಂದು ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶವನ್ನು ವ್ಯಕ್ತಪಡಿಸಿದರು

ನಂತರ ಮಾತನಾಡಿದ ಛ.ಮಾ.ಸ ಜಿಲ್ಲಾ ಉಪಾಧ್ಯಕ್ಷ ಹನುಮಂತಪ್ಪ ಗೋಮರ್ಶಿ. ಭಾರತ ದೇಶ ಪ್ರಜಾಪ್ರಭುತ್ವ ಸಂವಿದಾನಬದ್ದದಲ್ಲಿ ನಂಬಿಕೆ ಇಟ್ಟು ಸ್ವಾತಂತ್ರ್ಯ ಪಡೆದುಕೊಂಡು ಬಂದಿದೆ. ಇಂತಹ ಘಟನೆಗಳನ್ನು ಗಮನಿಸಿದಾಗ ಯಾರಿಗೆ ಬಂದಿದೆ ಸ್ವಾತಂತ್ರ್ಯ, ಎಲ್ಲಿದೆ ಪ್ರಜಾ ಪ್ರಭುತ್ವ, ದಲಿತರ ಮೇಲೆ ಇಂದಿಗೂ ದೇಶದಲ್ಲಿ ಅತ್ಯಾಚಾರ, ದಬ್ಬಾಳಿಕೆ, ದೌರ್ಜನ್ಯಗಳಂತಹ ಘಟನೆಗಳು ನಿರಂತರವಾಗಿ ನಡೆಯುತ್ತಲೇ ಇವೆ. ಇದಕ್ಕೆ ಕುಮ್ಮಕ್ಕಾಗಿ ಆರ್.ಎಸ್.ಎಸ್. ಮತ್ತು ಭಾಜಪ ಕೈ ಜೋಡಿಸುತ್ತಾ ಬಂದಿದ್ದು, ರಹಸ್ಯವಾಗಿ ಉಳಿದಿರುವದಿಲ್ಲ. ತೀರ ಇತ್ತೀಚೆಗೆ ಆರ್.ಎಸ್.ಎಸ್. ರಾಷ್ಟ್ರೀಯ ನಾಯಕರೊಬ್ಬರು, ಎಷ್ಟು ದಿನ ಪಾಕಿಸ್ತಾನದ ವಿರುದ್ಧ ದ್ವೇಷ ಸಾಧಿಸುತ್ತಿರಿ, ಇದನ್ನು ಬಿಡಿ ಎಂದು ಕರೆ ನೀಡಿದ್ದನ್ನು ನೋಡಿದಾಗ ಇವರು ಭಾರತೀಯರೇ? ಇಲ್ಲವೆ ಪಾಕಿಸ್ತಾನದವರೆ? ಎಂಬ ಅನುಮಾನ ಉಂಟಾಗುತ್ತದೆ. ಎಂದು ಹೇಳಿದರು

ಇದು ಸಾಲದೆಂಬಂತೆ ಈ ದೇಶದ ಪ್ರಧಾನ ಮಂತ್ರಿಗಳಾದ ಸನ್ಮಾನ್ಯ ನರೇಂದ್ರ ದತ್ತ ಮೋದಿಜಿಯವರು ಆಡಳಿತ ಹಿಡಿದಾಗಿನಿಂದ ಇಂದಿನ

ವರೆಗೂ ದೇಶದ ಒಂದಿಲ್ಲ ಒಂದು ರಾಜ್ಯದಲ್ಲಿ ದಲಿತರ ಮೇಲೆ ನಿತ್ಯ ನಿರಂತರ ಅತ್ಯಾಚಾರ, ದಬ್ಬಾಳಿಕೆ, ದೌರ್ಜನ್ಯಗಳಂತಹ ಘಟನೆಗಳು ನಿರಂತರವಾಗಿ ನಡೆಯುತ್ತಲೇ ಇವೆ, ಆದರೂ ಪ್ರಧಾನಿಗಳು ಈ ವಿಷಯವಾಗಿ ಮೌನವಾಗಿದ್ದು. ಯಾವುದೇ ಕ್ರಮ ಜರುಗಿಸದೇ ಇರವದನ್ನು ಗಮನಿಸಿದಾಗ ಇವರು ಕೂಡಾ ಮನುವಾದಿಗಳ ಸಾಲಿನಲ್ಲಿ ಬಂದು ನಿಲ್ಲುತ್ತಾರೆ.ಎಂದು ಪ್ರಧಾನಿ ವಿರುದ್ಧ ವಾಗ್ದಾಳಿ ನಡೆಸಿದರು.

ಆದರೆ ದೇಶದ ಮಹೋನ್ನತ ಜವಬ್ದಾರಿಯನ್ನು ವಹಿಸಿಕೊಂಡ ಮೇಲೆ ಇವರು ದಲಿತರು, ಇವರು ಪ್ರಭಾವಿ ಜಾತಿಯವರು ಎಂಬ ಭೇದ ಮಾಡಬಾರದಾಗಿತ್ತು, ಎಲ್ಲರೂ ಒಂದೆ ಎಂಬ ಭಾವನೆಯಿಂದ ಅವರು ಯಾರೇ ಆಗಲಿ ಅವರ ವಿರುದ್ದ ಕ್ರಮ ಜರುಗಿಸುವದನ್ನು ಬಿಟ್ಟು ಮೌನವಾಗಿರುವದು ಸರಿಯಾದ ಕ್ರಮವಾಗುವದಿಲ್ಲ.

ದಲಿತರ ಮೇಲೆ ಅತ್ಯಾಚಾರ, ದಬ್ಬಾಳಿಕೆ, ದೌರ್ಜನ್ಯಗಳಂತಹ ಘಟನೆಗಳು ನಿರಂತರವಾಗಿ ನಡೆದಾಗ ಯಾವುದೇ ಜಾತಿ, ಯಾವುದೇ ಪಕ್ಷ, ಇವುಗಳನ್ನು ಗಣನಗೆ ತೆಗೆದುಕೊಳ್ಳದೆ ಅಂತಹವರ ವಿರುದ್ದ ತಕ್ಷಣದಲ್ಲಿ ಕಾನೂನು ಕ್ರಮ ಜರುಗಿಸುವದು ವಿಹಿತವಾಗುತ್ತದೆ. ಮುಂದಿನ ದಿನಮಾನಗಳಲ್ಲಿ ಅವರಿಂದ ಈ ವಿಷಯವಾಗಿ ಕ್ರಮ ಜರುಗಿಸುತ್ತಾರೆ ಎಂಬ ಆಶಾ ಭಾವನೆಯನ್ನು ಹೊಂದಿದ್ದೇವೆ, ಈ ವಿಷಯವನ್ನು ತಾವುಗಳು ಪ್ರಧಾನಿಯವರ ಗಮನಕ್ಕೆ ತರಲು ಬೇಕು ಎಂದು ಹೇಳಿದರು

ಸಾಕು ಇಲ್ಲಿಯವರೆಗೆ ಆಗಿದ್ದು ಆಗಿದೆ, ಈ ಹಿಂದೆ ಇಂತಹ ಘಟನೆಗಳಲ್ಲಿ ಭಾಗಿಯಾದವರ ವಿರುದ್ಧ ತಾವುಗಳು ಕಾನೂನು ಕ್ರಮ ಜರುಗಿಸುವದು. ಮತ್ತು ದೇಶದ ಜನತೆ ಯಾವುದೇ ಜಾತಿಯವರು ಇರಲಿ ಎಲ್ಲರಿಗೂ ಒಂದೆ ನ್ಯಾಯ, ಒಂದೇ ಪ್ರಜಾಪ್ರಭುತ್ವ, ಒಂದೇ ಸಂವಿದಾನ ಆಗಬೇಕು, ಇದು ಕೇವಲ ಭಾಷಣ ಇಲ್ಲವೆ ದಾಖಲೆಗಳಲ್ಲಿ ಸೀಮಿತವಾಗದಂತೆ

ಕಟ್ಟುನಿಟ್ಟಾಗಿ ಅನುಷ್ಟಾನ ಜಾರಿಗೆ ಬರಬೇಕು.

ಅಂದರೆ ಮಾತ್ರ ಗಾಂಧೀಜಿಯವರು ಕಂಡ ಕನಸಾದ ಈ ದೇಶದ ಮಹಿಳೆಯೊಬ್ಬರು ಮಧ್ಯ ರಾತ್ರಿಯಲ್ಲಿ ಯಾರ ಭಯವಿಲ್ಲದೆ ತಿರುಗಾಡಿದಾಗ ಮಾತ್ರ ಸ್ವಾತಂತ್ರ್ಯಕ್ಕೆ ನಿಜವಾದ ಅರ್ಥಬರುತ್ತದೆ.

ಇದನ್ನು ಇಲ್ಲಿಗೆ ಅಂದರೆ ಇಂತಹ ಘಟನೆಗಳು ಮರುಕಳಿಸಿದಂತೆ ಆಯಾ ರಾಜ್ಯಗಳ ಆಡಳಿತಕೆ ಕಟ್ಟು ನಿಟ್ಟಿನ ಆದೇಶ ನೀಡಿ, ಘಟನೆಗಳು ಜರುಗಿದಾಗ ಕೂಡಲೇ ಕ್ರಮ ಜರುಗಿಸುವಂತೆ ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟ ತಾಲೂಕು ಸಮಿತಿ ತಹಸೀಲ್ದಾರ್ ಮೂಲಕ ಗೌರವಾನ್ವಿತ ರಾಷ್ಟ್ರಗಳಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು

ಈ ಸಂದರ್ಭದಲ್ಲಿ. ನರಸಪ್ಪ ಕಟ್ಟಿ ಮನೆ. ಛ.ಮಾ.ಸ.ಕಾರ್ಯದರ್ಶಿ ಶರಣಬಸವ.ವಿರುಪಣ್ಣ ಬೂದಿವಾಳ. ಮೌಲಪ್ಪ ವಕೀಲರು.ಪಂಪಾಪತಿ ಬೂದಿವಾಳ. ಹುಸೇನಪ್ಪ ಗೊರೇಬಾಳ. ಬಸವರಾಜ ಉದ್ಬಾಳ್, ಮುದುಕಪ್ಪ ಮಲ್ಲಾಪುರ. ಶರಣಪ್ಪ ದುರುಗಪ್ಪ ರಾಮಣ್ಣ ಗುಂಜಳ್ಳಿ. ಹುಸೇನಪ್ಪ ರಾಗಲರ್ವಿ. ಹುಲಗಪ್ಪ.ಬಿ .ಎಸ. ಪಿ ಸಮಾಜದ ಎಲ್ಲ ಮುಖಂಡರು ಸೇರಿದಂತೆ ಇತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಸಿಂಧನೂರಿನಲ್ಲಿ ಅಕ್ರಮ ಚಟುವಟಿಕೆಗಳ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕ್ರಮಕ್ಕೆ ಎಂಎಲ್ಸಿ ಬಸನಗೌಡ ಬಾದರ್ಲಿ ಒತ್ತಾಯ

ಚಟುವಟಿಕೆಗಳಿಗೆ ಸಂಪೂರ್ಣ ಕಡಿವಾಣ ಹಾಕಬೇಕು ಎಂದು ಬಸನಗೌಡ ಬಾದರ್ಲಿ ಅವರು ಒತ್ತಾಯಿಸಿದರು.

ಸಿಂಧನೂರು ತಾಲೂಕಿನ ಜನರಿಗೆ ಸುರಕ್ಷಿತ ಹಾಗೂ ಶಾಂತಿಯುತ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರವು ಪರಿಣಾಮಕಾರಿ ಮತ್ತು ನಿರಂತರ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

# ದೇವರಾಜ ಅರಸು ಸಮಾನತೆಯ ಹರಿಕಾರ: ಕೆ.ವಿರುಪಾಕ್ಷಪ್ಪ

ದೇವರಾಜ ಅರಸು ಅವರು ಸಾಮಾಜಿಕ ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಮಹಾನ್ ವ್ಯಕ್ತಿಯಾಗಿದ್ದು, ಅವರ ಆದರ್ಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಮುಖಂಡರು, ಜನಪ್ರತಿನಿಧಿಗಳು ಹಾಗೂ ದೇವರಾಜ ಅರಸು ಅವರ ಅಭಿಮಾನಿಗಳು ಉಪಸ್ಥಿತರಿದ್ದರು.

# ಪ್ರಯೋಜಕತ್ವ ಯೋಜನೆಗೆ ಅನುಷ್ಠಾನಕ್ಕೆ ಕೈಜೋಡಿಸಿ ಶರಣಮ್ಮ ಕಾರನೂರು

ಯಲ್ಲಪ್ಪ ಎಎಸ್ಐ ಮಕ್ಕಳ ಕಲ್ಯಾಣಾಧಿಕಾರಿಗಳು ರಾಯಚೂರು ಕಾರ್ಯಕ್ರಮದ ಮಾತನಾಡಿದರು.

ಮಕ್ಕಳ ಅಭಿವೃದ್ಧಿ ಈ ದೇಶದ ಅಭಿವೃದ್ಧಿ ಮಕ್ಕಳ ರಕ್ಷಣೆ ನಮ್ಮೆಲ್ಲರ ಹೊಣೆ ತಾವೆಲ್ಲರೂ ಈ ಕಾರ್ಯದಲ್ಲಿ ಭಾಗವಹಿಸಿ ಹೇಳುವಂಥ ಪ್ರತಿಯೊಂದು ಕಾರಣಾತ್ಮಕ ವಿಚಾರಗಳನ್ನು ಅರಿತುಕೊಂಡು ನಮ್ಮ ಕ್ಷೇತ್ರದಲ್ಲಿ ಅನುಷ್ಠಾನ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಮಕ್ಕಳ ವಿಚಾರ ಬಂದಾಗ ನಾವೆಲ್ಲರೂ ಕೈಜೋಡಿಸಿ ಮಕ್ಕಳ ಹಕ್ಕುಗಳನ್ನ ಉಲ್ಲಂಘನೆ ಆಗದಂತೆ ಕಾಪಾಡುವುದು ನಮ್ಮೆಲ್ಲರ ಪ್ರಮುಖ ಜವಾಬ್ದಾರಿಯಾಗಿದೆ ಪೋಷಕತ್ವ ಯೋಜನೆ ಯ ಬಗ್ಗೆ ಜನಸಾಮಾನ್ಯರಿಗೆ ಹಾಗೂ ಜಾಗೃತಿ ಮೂಡಿಸಿ ಎಂದು ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡ ಶ್ರೀಕುಮಾರ್ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ರಾಯಚೂರು ಇವರು ಮಾತನಾಡಿದರು.

ಈ ಸಂದರ್ಭದಲ್ಲಿ ಮಂಜುನಾಥ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳು ರಾಯಚೂರು ಎಂಡಿ ಗೋಕುಲ್ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು ರಾಯಚೂರು. ಆನಂದರಾಜ್ ನಿರ್ದೇಶಕರು ಮಾರ್ಗದರ್ಶಿ ಸೊಸೈಟಿ ಕಲಬುರ್ಗಿ. ಕಿರಲಿಂಗಪ್ಪ ರಕ್ಷಣಾಧಿಕಾರಿಗಳು ಅಸಂಸ್ಥೆ ಕ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ರಾಯಚೂರು. ಶಿವಮಲ್ಲು ರಾಜ್ಯ ಸಂಯೋಜಕರು ಪೋಷಕತ್ವ ಯೋಜನೆ, ಬೋಸ್ಕಮನೆ ಬೆಂಗಳೂರು. ಸುನಂದಾ ವ್ಯವಸ್ಥಾಪಕರು ಮಾರ್ಗದರ್ಶಿ ಸೊಸೈಟಿ ಕಲಬುರಗಿ.

ವೇದಿಕೆಯ ಮೇಲಿರುವಂತಹ ಎಲ್ಲಾ ಅಧಿಕಾರಿಗಳ ಸಮ್ಮುಖದಲ್ಲಿ ಪೋಷಕತ್ವ ಯೋಜನೆಯ ಪೋಸ್ಟರ್ಗಳನ್ನು ಬಿಡುಗಡೆ ಮಾಡಲಾಯಿತು.

ಈ ಕಾರ್ಯಕ್ರಮದಲ್ಲಿ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳು ಮತ್ತು ಮೇಲ್ವಿಚಾರಕರು ಹಾಗೂ ಅಂಗನವಾಡಿ ಕಾರ್ಯಕರ್ತರು. ಹಾಗೂ ಪೊಲೀಸ್ ಇಲಾಖೆ ಸಖಿ ಒನ್ ಸೆಂಟರ್ ಸಿಬ್ಬಂದಿಗಳು

ಸರ್ಕಾರಿ ತರ ಪಾಲನ ಸಂಸ್ಥೆಯ ಸಿಬ್ಬಂದಿಗಳು ಹಾಗೂ ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು ಭಾಗವಹಿಸಿದ್ದರು. ಪ್ರಾಸ್ತವಿಕ ನುಡಿಯನ್ನು ಸಿದ್ದಲಿಂಗಪ್ಪ ಕಾಕರಗಲ್ ಮಾತನಾಡಿದರು ನಿರುಪಣೆ ಕಾರ್ಯಕ್ರಮವನ್ನು ನಾಗರಾಜ್ ಮಾನಸಿ ನೆರವೇರಿಸಿ ಕೊಟ್ಟರು ಸ್ವಾಗತ ಕಾರ್ಯಕ್ರಮವನ್ನು ಚಿಕ್ಕಯ್ಯ ನೆರವೇರಿಸಿಕೊಟ್ಟರು ವಂದನಾರ್ಪಣೆಯನ್ನು ರವಿಚಂದ್ರನ್ ಮಾಡಿದರು.

**ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ**

# ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸಿಪಿಐ, ಎಐಟಿಯುಸಿ ಪಾದಯಾತ್ರೆ

ಆಳಂದ,ಆ.20-

ನಿಂಬರ್ಗಾ ಹೋಬಳಿ ಹಾಗೂ ಗ್ರಾಮಗಳ ವಿವಿಧ ಬಡಾವಣೆಗಳ ಜನರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿ ಭಾರತ ಕಮ್ಯುನಿಸ್ಟ್ ಪಕ್ಷ (ಸಿಪಿಐ) ಹಾಗೂ ನಿಂಬರ್ಗಾ ವಲಯ ಕಟ್ಟಡ ಕಾರ್ಮಿಕ ಸಂಘಟನೆ (ಎಐಟಿಯುಸಿ) ಜಂಟಿ ವಲಯ ಸಮಿತಿ ವತಿಯಿಂದ ಬುಧವಾರ ಪಾದಯಾತ್ರೆ ನಡೆಸಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಸಿಪಿಐ ಹಾಗೂ ಎಐಟಿಯುಸಿ ರಾಷ್ಟ್ರೀಯ ಮಂಡಳಿಯ ಕರೆಯ ಮೇರೆಗೆ ಆ.6ರಿಂದ 31ರವರೆಗೆ ದೇಶಾದ್ಯಂತ ಸ್ಥಳೀಯ ಸಮಸ್ಯೆಗಳನ್ನು ಗುರುತಿಸಿ ಅವುಗಳ ಪರಿಹಾರಕ್ಕಾಗಿ ಪಾದಯಾತ್ರೆ ಹಾಗೂ ಹೋರಾಟ ನಡೆಸಲಾಗುತ್ತಿದೆ. ಇದರ ಭಾಗವಾಗಿ ನಿಂಬರ್ಗಾ ಭಾಗದಲ್ಲಿ ಪಾದಯಾತ್ರೆ ಹಮ್ಮಿಕೊಳ್ಳಲಾಗಿತ್ತು.



ನಿಂಬರ್ಗಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಡವರು ಹಾಗೂ ಕಟ್ಟಡ ಕಾರ್ಮಿಕರಿಗೆ ವಸತಿ ಕಲ್ಪಿಸಲು ಸರ್ಕಾರಿ ಜಮೀನು ಮೀಸಲಿಡಬೇಕು. ಮನೆ ಇಲ್ಲದವರಿಗೆ ಮನೆ ನಿರ್ಮಿಸಿಕೊಡುವುದರ ಜತೆಗೆ ಮನೆ ನಿರ್ಮಾಣಕ್ಕೆ ಕನಿಷ್ಠ 5 ಲಕ್ಷ ರೂ. ಆರ್ಥಿಕ ನೆರವು ನೀಡಬೇಕು ಎಂದು ಮುಖಂಡರು ಆಗ್ರಹಿಸಿದರು.

ಕಳೆದ ನಾಲ್ಕೈದು ತಿಂಗಳಿಂದ ಸ್ಥಗಿತಗೊಂಡಿರುವ ವಿಧವಾ ವೇತನ, ವೃದ್ಧಾಪ್ಯ ವೇತನ, ವಿಶೇಷಚೇತನರ ಪಿಂಚಣಿ ಸೇರಿದಂತೆ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳ ಸಹಾಯಧನವನ್ನು ಕೂಡಲೇ ಬಿಡುಗಡೆ ಮಾಡಬೇಕು. ಪಿಂಚಣಿ ಮೊತ್ತವನ್ನು ಕನಿಷ್ಠ 3,000 ರೂ. ಗೆ ಹೆಚ್ಚಿಸಬೇಕು ಎಂದು ಒತ್ತಾಯಿಸಿದರು.

ನಿಂಬರ್ಗಾ ಮುಖ್ಯ ರಸ್ತೆಯಲ್ಲಿರುವ ಕಂಬದ ದ್ವೀಪವನ್ನು ದುರಸ್ತಿ ಮಾಡಬೇಕು. ಅಂಬೇಡ್ಕರ್ ವೃತ್ತದಿಂದ ಬಸ್ ನಿಲ್ದಾಣದವರೆಗೆ ಹಾಳಾಗಿರುವ ಚರಂಡಿಗಳನ್ನು ದುರಸ್ತಿ ಮಾಡಿ ಕೊಳಚೆ ನೀರು ರಸ್ತೆಗೆ ಹರಿಯದಂತೆ ಕ್ರಮ ಕೈಗೊಳ್ಳಬೇಕು. ನಿಂಬರ್ಗಾ ತಾಂಡಾದ ವಾರ್ಡ್ ನಂ.5ರಲ್ಲಿಯೂ ಚರಂಡಿ ಸ್ವಚ್ಛಗೊಳಿಸಿ ರಸ್ತೆ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಮಹಿಳೆಯರಿಗಾಗಿ ಶೌಚಾಲಯ ನಿರ್ಮಿಸಿ ಸಮರ್ಪಕ ನಿರ್ವಹಣೆಗೆ ವ್ಯವಸ್ಥೆ ಮಾಡಬೇಕು. ವಿವಿಧ ಬಡಾವಣೆಗಳು ಹಾಗೂ ಬುಳ್ಳನವರ ಓಣಿಯಲ್ಲಿ ಸಿಸಿ ರಸ್ತೆ ನಿರ್ಮಿಸಬೇಕು. ಜೈಭೀಮ ನಗರದ ಯಲ್ಲಮ್ಮ ಗುಡಿಯಿಂದ ಹಿತ್ತಲಶಿರೂರು ರಸ್ತೆಯವರೆಗೆ ಸಿಸಿ ರಸ್ತೆ ನಿರ್ಮಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ನಿಂಬರ್ಗಾ ನಾಡ ಕಚೇರಿಯ ಆಧಾರ್ ಸೇವಾ ಕೇಂದ್ರ ಸ್ಥಗಿತಗೊಂಡಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಕೂಡಲೇ ಆಧಾರ್ ಸೇವಾ ಕೇಂದ್ರವನ್ನು ಪುನರಾರಂಭಿಸಿ ಜನರಿಗೆ ಅನುಕೂಲ ಕಲ್ಪಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಭೀಮಾಶಂಕರ ಮಾಡಿಯಾಳ, ಯಲ್ಲಪ್ಪ ಎಸ್. ಕಟ್ಟಿಮನಿ, ಪ್ರಭುದೇವ ಯಳಸಂಗಿ, ಮೌಲಾ ಮುಲ್ಲಾ, ಯಂಕಪ್ಪ ಬನಪಟ್ಟಿ, ಬಸವರಾಜ ಅರ್ಜುಣಗಿ, ರಮೇಶ್ ರಾಠೋಡ್, ಜಗನ್ನಾಥ, ಶಿವಲಿಂಗಮ್ಮ ಲೇಂಗಟಿಕರ್ ಸೇರಿದಂತೆ ಸಿಪಿಐ ಹಾಗೂ ಎಐಟಿಯುಸಿ ಮುಖಂಡರು, ಕಾರ್ಯಕರ್ತರು ಮತ್ತು ಸ್ಥಳೀಯರು ಪಾಲ್ಗೊಂಡಿದ್ದರು.



## ರಾಷ್ಟ್ರಮಟ್ಟದ ಒಪನ್ ಕರಾಟೆ ಪಂದ್ಯಾವಳಿ:ಎಸ್.ಆರ್.ಎನ್ ಮೆಹತಾ ಶಾಲೆ ವಿದ್ಯಾರ್ಥಿಗಳಿಗೆ ವಿವಿಧ ಬಹುಮಾನ

ಕಲಬುರಗಿ,ಆ.20-

ಹೈದ್ರಾಬಾದ್‌ನ ವಿಜಯ ಭಾಸ್ಕರ್ ರೆಡ್ಡಿ ಸ್ಟೆಡಿಯಂ ಆಯೋಜಿಸಿದ್ದ ರಾಷ್ಟ್ರ ಮಟ್ಟದ ಓಪನ್ ಕರಾಟೆ ಚಾಂಪಿಯನ್ ಶಿಫ್ ಪಂದ್ಯದಲ್ಲಿ ನಗರದ ಎಸ್. ಆರ್. ಎನ್. ಮೆಹತಾ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿ ವಿಜೇತರಾಗಿದ್ದಾರೆ.

ಬಾಲಕಿಯರ ಸ್ಪರ್ಧೆಯಲ್ಲಿ : 6 ವರ್ಷದ ತ್ರಿಶಾ ಕಟಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ,7 ವರ್ಷದ ವೃತಿಕಾ-25 ಕೆಜಿ- ಕುಮತೆ ಮತ್ತು ಕಟಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ,7 ವರ್ಷದ ಹನ್ವಿತಾ ಕಟಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ,

11 ವರ್ಷದ ಪ್ರತಿಕ್ಷಾ ಕಟಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ,14-15 ವರ್ಷದ ಜಾನ್ಹವಿ -55 ಕೆಜಿ- ಕುಮತೆ ಮತ್ತು ಕಟಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ,13 ವರ್ಷದ ಪ್ರತ್ಯುಶಾ -ಕಟಾ ಸ್ಪರ್ಧೆಯಲ್ಲಿ ತೃತಿಯ ಸ್ಥಾನ,

13 ವರ್ಷದ ಸುನಿಕ್ಷಾ ಕಟಾ ಸ್ಪರ್ಧೆಯಲ್ಲಿ ತೃತಿಯ ಸ್ಥಾನವನ್ನು ಪಡೆದಿದ್ದಾರೆ

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಆಡಳಿತ ಮಂಡಳಿಯ ಟ್ರಸ್ಟಿಗಳಾದ ಚಕೋರ ಮೆಹತಾ, ಪ್ರಾಚಾರ್ಯರಾದ ಪ್ರೀತಿ ಮೆಹತಾ, ದೈಹಿಕ ಶಿಕ್ಷಣದ ವಿಭಾಗ ಮುಖ್ಯಸ್ಥ ಬಸವರಾಜ ತಳಕೇರಿ, ಕರಾಟೆ ತರಬೇತಿದಾರರಾದ ಕೃಷ್ಣಾ ಗೌಳಿ, ಮಣಿಕಂಠ ಜುಮ್ಮಣ್ಣಾ ಹಾಗೂ ಶಿಕ್ಷಕ ವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ.

# ಸಿಯುಕೆನಲ್ಲಿ ನೂತನ ಕಂಪ್ಯೂಟಿಂಗ್, ಎಚ್‌ಪಿಸಿ ಪ್ರಯೋಗಾಲಯ ಉದ್ಘಾಟನೆ

ಆಳಂದ,ಆ.20-

ತಾಲೂಕಿನ ಕಡಗಂಚಿ ಸಮೀಪದ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಗಣಿತ ವಿಭಾಗದಲ್ಲಿ ನೂತನವಾಗಿ ಸ್ಥಾಪಿಸಲಾದ ಕಂಪ್ಯೂಟಿಂಗ್ ಪ್ರಯೋಗಾಲಯ, ಹೈ ಪರ್ಫಾರ್ಮೆನ್ಸ್ ಕಂಪ್ಯೂಟಿಂಗ್ (ಎಚ್‌ಪಿಸಿ) ಪ್ರಯೋಗಾಲಯ ಹಾಗೂ ರಾಷ್ಟ್ರೀಯ ಉನ್ನತ ಗಣಿತ ಮಂಡಳಿ (ಎನ್‌ಬಿಎಚ್‌ಎಂ) ಗ್ರಂಥಾಲಯವನ್ನು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಬಿ.ಟೆಕ್. ಗಣಿತ ಮತ್ತು ಕಂಪ್ಯೂಟಿಂಗ್ ವಿದ್ಯಾರ್ಥಿಗಳಿಗಾಗಿ ದೇಶ ಹಾಗೂ ವಿದೇಶಗಳಲ್ಲಿ ಲಭ್ಯವಿರುವ ಉನ್ನತ ಶಿಕ್ಷಣ ಮತ್ತು ವೃತ್ತಿ ಅವಕಾಶಗಳ ಕುರಿತು ನಿಮ್ಮ ವೃತ್ತಿ ಪಥ ರೂಪಿಸಿಕೊಳ್ಳಿ ಎಂಬ ವೃತ್ತಿ ಮಾರ್ಗದರ್ಶಿ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು.

ಗಣಿತ ವಿಭಾಗದ ಮುಖ್ಯಸ್ಥ ಪ್ರೊ. ಜಿ. ಜನಾರ್ದನ ರೆಡ್ಡಿ ಮಾತನಾಡಿ, ನೂತನ ಕಂಪ್ಯೂಟಿಂಗ್ ಹಾಗೂ ಎಚ್‌ಪಿಸಿ ಪ್ರಯೋಗಾಲಯಗಳು ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳ ಜತೆಗೆ ಸಂಶೋಧನಾ ಕಾರ್ಯಗಳಿಗೆ ನೆರವಾಗಲಿವೆ. ಎನ್‌ಬಿಎಚ್‌ಎಂ ಗ್ರಂಥಾಲಯವು ಗಣಿತ ಕ್ಷೇತ್ರದ ಅಧ್ಯಯನ ಮತ್ತು ಸಂಶೋಧನೆಗೆ ಅಗತ್ಯ ಸಂಪನ್ಮೂಲಗಳನ್ನು ಒದಗಿಸಲಿದೆ ಎಂದರು.

ವಿಶ್ವವಿದ್ಯಾಲಯದ ಪರೀಕ್ಷಾ ನಿಯಂತ್ರಕ ಪ್ರೊ. ಭರತ್ ಕುಮಾರ್, ಭೌತ ವಿಜ್ಞಾನ ನಿಕಾಯದ ಡೀನ್ ಪ್ರೊ. ರಾಜೀವ್ ಶೇಷ ಜೋಶಿ ಹಾಗೂ ಕೇಂದ್ರ ಗ್ರಂಥಪಾಲಕ ಡಾ. ಪಿ.ಎಸ್. ಕಟ್ಟಿಮನಿ ಮಾತನಾಡಿದರು.

ನೂತನ ಸೌಲಭ್ಯಗಳು ವಿದ್ಯಾರ್ಥಿಗಳಲ್ಲಿ ಆಧುನಿಕ ತಂತ್ರಜ್ಞಾನ ಹಾಗೂ ಗಣಿತ ಸಂಶೋಧನೆಯತ್ತ ಆಸಕ್ತಿ ಹೆಚ್ಚಿಸುವುದರ ಜತೆಗೆ, ಉನ್ನತ ಶಿಕ್ಷಣ ಮತ್ತು ವೃತ್ತಿಜೀವನಕ್ಕೆ ಅಗತ್ಯವಾದ ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಸಹಕಾರಿಯಾಗಲಿವೆ ಎಂದು ಅಭಿಪ್ರಾಯ ವ್ಯಕ್ತವಾಯಿತು.

ಕಾರ್ಯಕ್ರಮವು ವಂದೇ ಮಾತರಂದೊಂದಿಗೆ ಆರಂಭವಾಗಿ ರಾಷ್ಟ್ರಗೀತೆಯೊಂದಿಗೆ ಮುಕ್ತಾಯಗೊಂಡಿತು. ಡಾ. ಮೇಘಾ ಖಂಡೇಲ್ವಾಲ್ ನಿರೂಪಿಸಿದರು. ಡಾ. ಸುಮುಖ ಎಸ್. ವಂದನಾರ್ಪಣೆ ಸಲ್ಲಿಸಿದರು.

ಗಣಿತ ವಿಭಾಗದ ಡಾ. ಎನ್.ಸಂದೀಪ್, ಡಾ.ಶ್ರೀನಿವಾಸುಲು ಬಲ್ಲೆಮ್, ಡಾ.ರಂಗನಾಥ ಡಿ., ಡಾ.ಸಮೀರ್ ಡಾ.ದೇವಿಕಾ ದಾಬ್ಕೆ, ತಾಂತ್ರಿಕ ಸಹಾಯಕ ಶಶಿಕಾಂತ ಸೇರಿದಂತೆ ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಕಲಾವಿದರು ಕಲಾ ಗ್ಯಾಲರಿ ಸಂಸ್ಕೃತಿಯ ಅರಿವು ಹೊಂದಿರಬೇಕು : ಡಾ.ಪರಶುರಾಮ



ಕಲಬುರಗಿ,ಆ.20-

ಕಲಾವಿದರು ಸೃಜನಶೀಲ ಚಿತ್ರಕಲಾಕೃತಿಗಳನ್ನು ರಚಿಸುವುದರ ಜತೆಗೆ ಕಲಾ ಗ್ಯಾಲರಿ ಸಂಸ್ಕೃತಿಯ ಬಗ್ಗೆಯೂ ಅರಿವು ಹೊಂದಿರಬೇಕು ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ದೃಶ್ಯಕಲಾ ಅಧ್ಯಯನ ವಿಭಾಗದ ಅಧ್ಯಾಪಕ ಡಾ. ಪರಶುರಾಮ ಪಿ. ಹೇಳಿದರು.

ನಗರದ ರಾಮಮಂದಿರ ಹಿಂಭಾಗದಲ್ಲಿರುವ ಬಿಸಿಲು ಆರ್ಟ್ ಗ್ಯಾಲರಿಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಧನಸಹಾಯದಲ್ಲಿ ಯಾದಗಿರಿಯ ಯುವ ಚಿತ್ರಕಲಾವಿದ ತಿಪ್ಪಣ್ಣ ಜಾಧವ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು. ಪ್ರಸ್ತುತ ಕಲಾ ಮಾರುಕಟ್ಟೆ, ವೀಕ್ಷಕರ ಅಭಿರುಚಿ, ಕಲಾ ವಿಮರ್ಶಕರು, ಕಲಾ ಸಂಗ್ರಾಹಕರು, ಕ್ಯೂರೇಟರ್‌ಗಳು ಹಾಗೂ ಗ್ರಾಹಕರ ಮನೋಭಾವದ ಬಗ್ಗೆ ಕಲಾವಿದರು ತಿಳಿದುಕೊಳ್ಳಬೇಕು. ರಾಜ್ಯ, ರಾಷ್ಟ್ರ ಹಾಗೂ ವಿದೇಶಗಳಲ್ಲಿ ನಡೆಯುವ ಸಮಕಾಲೀನ ಕಲಾ ಪ್ರದರ್ಶನಗಳ ಬಗ್ಗೆಯೂ ಅರಿವು ಹೊಂದಿರಬೇಕು ಎಂದರು.

ಚಿತ್ರಕಲಾವಿದರು ಪ್ರದರ್ಶನ ಆಯೋಜಿಸುವ ಸಂದರ್ಭದಲ್ಲಿ ಕಲಾ ಗ್ಯಾಲರಿಯ ಅಳತೆ ಮತ್ತು ವಿನ್ಯಾಸಕ್ಕೆ ಅನುಗುಣವಾಗಿ ಸೂಕ್ತ ಸಂಖ್ಯೆಯ ಕಲಾಕೃತಿಗಳನ್ನು ಯೋಗ್ಯ ವಾತಾವರಣದಲ್ಲಿ ಪ್ರದರ್ಶಿಸಬೇಕು ಎಂದು ಸಲಹೆ ನೀಡಿದರು.

ಯುವ ಚಿತ್ರಕಲಾವಿದ ತಿಪ್ಪಣ್ಣ ಜಾಧವ ಅವರ ವರ್ಣಚಿತ್ರಗಳಲ್ಲಿ ಭಾರತದ ವಿವಿಧ ಪ್ರದೇಶಗಳ ಸಾಂಪ್ರದಾಯಿಕ ಚಿತ್ರಕಲಾ ಶೈಲಿಗಳ ಪ್ರಭಾವ ಹಾಗೂ ಪ್ರೇರಣೆ ಕಂಡುಬರುತ್ತದೆ. ಮುಂದಿನ ದಿನಗಳಲ್ಲಿ ತಮ್ಮದೇ ಆದ ವಿಶಿಷ್ಟ ಶೈಲಿಯನ್ನು ರೂಪಿಸಿಕೊಂಡು ಗಂಭೀರ ಹಾಗೂ ಗುಣಮಟ್ಟದ ಕಲಾಕೃತಿಗಳನ್ನು ರಚಿಸಲಿ ಎಂದು ಆಶಿಸಿದರು.

ಕರ್ನಾಟಕ ರಾಜ್ಯ ಚಿತ್ರಕಲಾ ಶಿಕ್ಷಕರ ಸಂಘದ ಕಲಬುರಗಿ ಜಿಲ್ಲಾ ಘಟಕದ ಅಧ್ಯಕ್ಷ ಶಾಮತಮಲ್ಲ ಶಿವಭೋ ಅವರು ಪ್ರದರ್ಶನಕ್ಕೆ ಚಾಲನೆ ನೀಡಿ, ಉತ್ತಮ ಕಲಾಕೃತಿ ರಚನೆಯ ಹಿಂದೆ ಕಲಾವಿದನ ಅಪಾರ ಪರಿಶ್ರಮವಿರುತ್ತದೆ. ಹಗಲು-ರಾತ್ರಿ ಎನ್ನದೆ ಶ್ರಮಿಸಿ ಕಲಾಕೃತಿ ರಚಿಸಿದಾಗ ಕಲಾವಿದನ ಜೀವನ ಸಾರ್ಥಕವಾಗುತ್ತದೆ ಎಂದರು.

ಕಲಾ ಪ್ರತಿಷ್ಠಾನದ ಕಾರ್ಯದರ್ಶಿ ಶೈಲಜಾ ಬಿರಾದಾರ ಅಧ್ಯಕ್ಷತೆ ವಹಿಸಿ ಮಾತನಾಡಿ, ಚಿತ್ರಕಲೆ ಕೇವಲ ಬಣ್ಣಗಳ ಸಮ್ಮಿಶ್ರಣವಲ್ಲ. ಯಾವುದೇ ಭಾಷೆಯ ಹಂಗಿಲ್ಲದೆ ನೇರವಾಗಿ ನೋಡುಗನ ಹೃದಯವನ್ನು ತಲುಪುವ ಶಕ್ತಿ ಚಿತ್ರಕಲೆಗಿದೆ. ಕಲೆ, ಸಂಸ್ಕೃತಿ, ಇತಿಹಾಸ ಹಾಗೂ ಭಾವನೆಗಳ ಜೀವಂತ ದಾಖಲೆಯಾಗಿದೆ ಎಂದು ಹೇಳಿದರು.

ಚಿತ್ರಕಲಾವಿದ ತಿಪ್ಪಣ್ಣ ಜಾಧವ ಮಾತನಾಡಿದರು.

ಕಲಾವಿದರಾದ ಶಿವಾನಂದ ಬಂಟನೂರ, ಸಿವಾನಂದ ಕೊಪ್ಪದ, ದೌಲತರಾಯ ದೇಸಾಯಿ, ಕುಪೇಂದ್ರ, ಗಿರೀಶ್ ಕುಲಕರ್ಣಿ, ದಾನಯ್ಯ ಚೌಕಿಮಠ, ಮಲ್ಲಿಕಾರ್ಜುನ ಕೋರಳ್ಳಿ, ಶಶಿಕಾಂತ ಪಾಟೀಲ್, ವಿಜಯ ಅವರಾದ, ಕಾವ್ಯ ಗಡ್ಡಿ, ಸಿದ್ಧರಾಮಯ್ಯ, ಅಭಿಜಿತ ಎಸ್. ಕೆ ಸೇರಿದಂತೆ ಕಲಾ ವಿದ್ಯಾರ್ಥಿಗಳು ಹಾಗೂ ಕಲಾಸಕ್ತರು ಭಾಗವಹಿಸಿದ್ದರು. ಕಲಾವಿದ ಸೂರ್ಯಕಾಂತ ನಂದೂರ ಸ್ವಾಗತಿಸಿ, ಕಾರ್ಯಕ್ರಮ ನಿರ್ವಹಿಸಿ ವಂದಿಸಿದರು.



## ಉದ್ಯೋಗ ನೋಂದಣಿ; ಯುವನಿಧಿ ಯೋಜನೆ ಮಾಹಿತಿ ಕಾರ್ಯಕ್ರಮ

ಕಲಬುರಗಿ.ಆ.20-

ನಗರದ ಜೇವರ್ಗಿ ಕಾಲೋನಿಯ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಕಾಲೇಜಿನ ಬಿಎ, ಬಿಕಾಂ, ಬಿಎಸ್ಸಿ ಹಾಗೂ ಬಿಬಿಎ ವಿದ್ಯಾರ್ಥಿನಿಯರಿಗೆ ಸಂಚಾರಿ ಉದ್ಯೋಗ ನೋಂದಣಿ, ಉದ್ಯೋಗಾವಕಾಶಗಳು ಮತ್ತು ಯುವನಿಧಿ ಯೋಜನೆಯ ಮಾಹಿತಿಯನ್ನು ನೀಡಲು ಕಾಲೇಜಿನ ಉದ್ಯೋಗ ಕೋಶ ದ ಸಹಯೋಗದೊಂದಿಗೆ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲ ಡಾ. ಮೋರಗೆ ಪ್ರಕಾಶ ಅವರು ವಹಿಸಿದ್ದರು. ಕಾರ್ಯಕ್ರಮವನ್ನು ಪವಿತ್ರಾ ನಿರೂಪಿಸಿದರೆ,ವಿದ್ಯಾರ್ಥಿನಿಯರಾದ ಅರುಣಾ ಮತ್ತು ಅನಿತಾ ಸ್ವಾಗತ ಗೀತೆಯನ್ನು ಹಾಡಿದರು. ಕಾಲೇಜಿನ ಉದ್ಯೋಗ ಕೋಶದ ಸಂಚಾಲಕ ಡಾ. ಸಂಗಣ್ಣ ವಿ ನಿಷ್ಠಿ ಎಲ್ಲರನ್ನೂ ಸ್ವಾತಿಸಿದರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕನಿರ್ದೇಶಕರಾದ ಭಾರತಿ ಆಗಮಿಸಿದ್ದರು. ಸಂಪನ್ಮೂಲ ವ್ಯಕ್ತಿಯಾಗಿ ಸತೀಶ್ ರಾಠೋಡ ಅವರು ಆಗಮಿಸಿ ಉದ್ಯೋಗಅವಕಾಶಗಳು, ಯುವನಿಧಿ ಯೋಜನೆಯ ಮಹತ್ವದ ಬಗ್ಗೆ ವಿಸ್ತಾರವಾಗಿ ಮಾತನಾಡಿದರು. ಉದ್ಯೋಗ ನೊಂದಣಿಯ ಮಹತ್ವವನ್ನು ತಿಳಿಸಿದರು. ಜೊತೆಗೆ ನೆಹರೂ ಯುವ ಕೇಂದ್ರದ ರಾಜು ಅವರು ಮೈ ಭಾರತ್ ಗೆ ನೋಂದಣಿಯಾಗಿ ಸದುಪಯೋಗಪಡಿಸಿಕೊಳ್ಳುವುದರ ಬಗ್ಗೆ ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಪ್ರಥಮ ದರ್ಜೆ ಸಹಾಯಕ ಶರಣಪ್ಪ ಒಕ್ಕಲಕುಂಟಿ ಉಪಸ್ಥಿತರಿದ್ದರು. ಜೊತೆಗೆ, ಪ್ರಾಧ್ಯಾಪಕರಾದ ಡಾ. ವಿನೋದಕುಮಾರ್ ರಾಠೋಡ್, ಗ್ರಂಥಪಾಲಕ ಡಾ. ವಿನೋದ್ ಕುಮಾರ, ಅತಿಥಿ ಉಪನ್ಯಾಸಕರು ಹಾಗೂ ಎಲ್ಲಾ ವಿಭಾಗಗಳ ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಸುಮಾರು 210 ವಿದ್ಯಾರ್ಥಿನಿಯರು ಉದ್ಯೋಗ ನೋಂದಣಿ ಮಾಡಿಸಿದರು. ಸೋನಿಯಾ, ಚೈತ್ರಾ ಹಾಗೂ ಲಕ್ಷ್ಮಿ ನೋಂದಣಿಗಾಗಿ ಅಗತ್ಯ ಸಹಾಯ ನೀಡಿದರು. ಸಹನಾ ರವರು ವಂದಿಸಿದರು. ನೋಂದಣಿ ಕಾರ್ಯಕ್ರಮದ ಯಶಸ್ಸಿ ಗೆ ಎಲ್ಲಾ ಅಧ್ಯಾಪಕ ಬಂಧುಗಳು ಹರ್ಷ ವ್ಯಕ್ತಪಡಿಸಿದರು.

## ಬಳ್ಳಾರಿಯಲ್ಲಿ ಬಾಲಕಾರ್ಮಿಕ ವಿರೋಧಿ ಕಾರ್ಯಾಚರಣೆ: ಇಬ್ಬರು ಮಕ್ಕಳ ರಕ್ಷಣೆ

ಬಳ್ಳಾರಿ,ಆ.20-

ನಗರದಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಕಾನೂನು ಸೇವೆಗಳ

ಪ್ರಾಧಿಕಾರದ ಜಂಟಿ ಸಹಯೋಗದಲ್ಲಿ ವಿಶೇಷ ತಪಾಸಣಾ ಕಾರ್ಯಾಚರಣೆ ನಡೆಸಲಾಗಿದ್ದು, ಕೆಲಸದಲ್ಲಿ ತೊಡಗಿದ್ದ ಇಬ್ಬರು ಬಾಲ/ ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದೆ.

# ಪಿಂಚಣಿ ಸಮಸ್ಯೆ ಇತ್ಯರ್ಥಕ್ಕೆ ಆಗ್ರಹಿಸಿ ಸೆ,2 ರಂದು ಕೊಪ್ಪಳದಲ್ಲಿ ಎಸ್‌ಯುಸಿಐ(ಸಿ) ಪಕ್ಷದಿಂದ ಬೃಹತ್ ಪ್ರತಿಭಟನೆ




ಕೊಪ್ಪಳ: ಅರ್ಹ ಫಲಾನುಭವಿಗಳಿಗೆ ಸ್ಥಗಿತಗೊಂಡಿರುವ ಮಾಸಿಕ ಪಿಂಚಣಿಯನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಹಾಗೂ ಮರುಪರಿಶೀಲನೆ ಪ್ರಕ್ರಿಯೆಯನ್ನು ಸರಳಗೊಳಿಸಬೇಕೆಂದು ಆಗ್ರಹಿಸಿ, ಸೋಶಿಯಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಎಸ್‌ಯುಸಿಐ(ಸಿ) ಕೊಪ್ಪಳ ಜಿಲ್ಲಾ ಸಮಿತಿ ವತಿಯಿಂದ ಸೆಪ್ಟೆಂಬರ್ 2, 2026ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘಟನೆಯ ರಾಜ್ಯ ಸಮಿತಿ ಸದಸ್ಯ ರಾಮಾಂಜನಪ್ಪ ಆಲ್ದಳ್ಳಿ ಹೇಳಿದರು,

ಅವರು ಗುರುವಾರ ನಗರದಲ್ಲಿರುವ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪತ್ರಿಕಾ ಭವನದಲ್ಲಿ ಏರ್ಪಡಿಸಿದ ಸುದ್ದಿಗೋಷ್ಠಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡುತ್ತಾ

ರಾಜ್ಯ ಸರ್ಕಾರವು ಸಾಮಾಜಿಕ ಭದ್ರತಾ ಯೋಜನೆಯಡಿ ವೃದ್ಧರು, ವಿಧವೆಯರು, ವಿಕಲಚೇತನರು, ಅವಿವಾಹಿತ ಮಹಿಳೆಯರು ಹಾಗೂ ತೃತೀಯ ಲಿಂಗಿಗಳಿಗೆ ನೀಡಲಾಗುತ್ತಿದ್ದ ಪಿಂಚಣಿಯನ್ನು ಕಳೆದ ಐದು ತಿಂಗಳುಗಳಿಂದ ಸ್ಥಗಿತಗೊಳಿಸಿದೆ. ಅನರ್ಹರನ್ನು ಪತ್ತೆಹಚ್ಚುವ ಮತ್ತು ದಾಖಲೆಗಳ ಮರುಪರಿಶೀಲನೆಯ ನೆಪವೊಡ್ಡಿ ಅರ್ಹ ಬಡ ಫಲಾನುಭವಿಗಳನ್ನೂ ಪಿಂಚಣಿಯಿಂದ ವಂಚಿಸಲಾಗುತ್ತಿದೆ. ಕೇವಲ ಎಸ್‌ಎಂಎಸ್ ಹಾಗೂ ನೋಟಿಸ್ ಮೂಲಕ ಮಾಹಿತಿ ನೀಡಿ ಜುಲೈ ಒಳಗಾಗಿ ದಾಖಲೆ ಸಲ್ಲಿಸಲು ಸೂಚಿಸಿರುವುದು ಅನಕ್ಷರಸ್ಥ ಗ್ರಾಮೀಣ ಜನರಲ್ಲಿ ತೀವ್ರ ಗೊಂದಲವನ್ನುಂಟುಮಾಡಿದೆ ಎಂದು ಪಕ್ಷ ಆರೋಪಿಸಿದೆ.

ಪ್ರಮುಖ ಆಕ್ಷೇಪಣೆಗಳು ಹಾಗೂ ಸಮಸ್ಯೆಗಳು:

ಅವೈಜ್ಞಾನಿಕ ಆದಾಯ ಮಿತಿ: ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ₹32,000ಕ್ಕೆ ನಿಗದಿಪಡಿಸಲಾಗಿದೆ. ನರೇಗಾ ಯೋಜನೆಯಲ್ಲಿ 100 ದಿನ ದುಡಿಯುವ ಕೂಲಿಕಾರ್ಮಿಕನೂ ವರ್ಷಕ್ಕೆ ₹36,900 ಗಳಿಸುವಾಗ, ಈ ಆದಾಯ ಮಿತಿ ತೀರಾ ಅವಾಸ್ತವಿಕವಾಗಿದೆ.

ಅಧಿಕಾರಿಗಳ ಅಲಭ್ಯತೆ: ಆದಾಯ ಪ್ರಮಾಣ ಪತ್ರ ನೀಡಬೇಕಾದ ಕಂದಾಯ ಅಧಿಕಾರಿಗಳು ಎಸ್‌ಎಸ್‌ಆರ್ ಪ್ರಕ್ರಿಯೆಯಲ್ಲಿ ನಿರತರಾಗಿದ್ದು, ಬಡವರು ದಿನನಿತ್ಯ ಕಚೇರಿಗಳ ಮುಂದೆ ಕ್ಯೂ ನಿಲ್ಲುವಂತಾಗಿದೆ. ಮನೆ ಬಾಗಿಲಿಗೇ ಹೋಗಿ ದಾಖಲೆ ಸಂಗ್ರಹಿಸುವುದಾಗಿ ಹೇಳಿದ್ದ ಸರ್ಕಾರ, ಬಡವರನ್ನು ಅಲೆದಾಡಿಸುತ್ತಿದೆ ಎಂದು ತೀವ್ರ ಕಳವಳ ವ್ಯಕ್ತಪಡಿಸಿದ್ದರು,

ಮುಂದುವರೆದು ಮಾತನಾಡಿ

ಪ್ರಮುಖ ಹಕ್ಕೊತ್ತಾಯಗಳು:

ಪಿಂಚಣಿ ಮರುಪರಿಶೀಲನೆಗಾಗಿ ಪಂಚಾಯಿತಿ ಮಟ್ಟದಲ್ಲಿ ಪ್ರತ್ಯೇಕ ಸಿಬ್ಬಂದಿಯನ್ನು ನೇಮಿಸಿ, ಪ್ರಕ್ರಿಯೆಯನ್ನು ತ್ವರಿತಗೊಳಿಸಿ ಹಳೆಯ ಬಾಕಿ ಸಹಿತ ಹಣ ಪಾವತಿಸಬೇಕು.

₹32,000 ವಾರ್ಷಿಕ ಆದಾಯ ಮಿತಿಯನ್ನು ರದ್ದುಪಡಿಸಿ, ಹಿಂದಿನಂತೆ ಬಿಪಿಎಲ್ ಪಡಿತರ ಚೀಟಿಯನ್ನೇ ಮಾನದಂಡವಾಗಿ ಪರಿಗಣಿಸಬೇಕು.

ಫಲಾನುಭವಿಗಳ ಮನೆ ಬಾಗಿಲಿಗೆ ತೆರಳಿ ದಾಖಲೆಗಳನ್ನು ಸಂಗ್ರಹಿಸಬೇಕು ಮತ್ತು ಸೂಕ್ತ ಪ್ರಚಾರ ನೀಡಬೇಕು.

ಈ ಹೋರಾಟದಲ್ಲಿ ಸಾರ್ವಜನಿಕರು ಹಾಗೂ ಸಂತ್ರಸ್ತ ಫಲಾನುಭವಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಎಸ್‌ಯುಸಿಐ(ಸಿ) ರಾಜ್ಯ ಸಮಿತಿ ಸದಸ್ಯ ರಾಮಲಿಂಗಪ್ಪ ಅಲ್ಲಳ್ಳಿ ತಿಳಿಸಿದ್ದಾರೆ , ಪತ್ರಿಕಾಗೋಷ್ಠಿಯಲ್ಲಿ ಸಮಿತಿಯ ಜಿಲ್ಲಾ ಮುಖಂಡ ಶರಣು ಗಡ್ಡಿ ಉಪಸ್ಥಿತರಿದ್ದು ಸಂಬಂಧಿಸಿದ ಫಲಾನುಭವಿಗಳಿಗೆ ಪ್ರಕಟಣೆಯಲ್ಲಿ ಕರೆ ನೀಡಿದ್ದಾರೆ.

## ರಾಷ್ಟ್ರಮಟ್ಟದ ಓಪನ್ ಕರಾಟೆ ಪಂದ್ಯಾವಳಿ:ಎಸ್.ಆರ್.ಎನ್ ಮೆಹತಾ ಶಾಲೆ ವಿದ್ಯಾರ್ಥಿಗಳಿಗೆ ವಿವಿಧ ಬಹುಮಾನ

ಕಲಬುರಗಿ,ಆ.20-

ಹೈದ್ರಾಬಾದ್‌ನ ವಿಜಯ ಭಾಸ್ಕರ್ ರೆಡ್ಡಿ ಸ್ಟೇಡಿಯಂ ಆಯೋಜಿಸಿದ್ದ ರಾಷ್ಟ್ರ ಮಟ್ಟದ ಓಪನ್ ಕರಾಟೆ ಚಾಂಪಿಯನ್ ಶಿಫ್ ಪಂದ್ಯದಲ್ಲಿ ನಗರದ ಎಸ್. ಆರ್. ಎನ್. ಮೆಹತಾ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿ ವಿಜೇತರಾಗಿದ್ದಾರೆ.

ಬಾಲಕಿಯರ ಸ್ಪರ್ಧೆಯಲ್ಲಿ : 6 ವರ್ಷದ ತ್ರಿಶಾ ಕಟಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ,7 ವರ್ಷದ ವೃತಿಕಾ-25 ಕೆಜಿ- ಕುಮತೆ ಮತ್ತು ಕಟಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ,7 ವರ್ಷದ ಹನ್ವಿತಾ ಕಟಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ,

11 ವರ್ಷದ ಪ್ರತಿಕ್ಷಾ ಕಟಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ,14-15 ವರ್ಷದ ಜಾನ್ಹವಿ -55 ಕೆಜಿ- ಕುಮತೆ ಮತ್ತು ಕಟಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ,13 ವರ್ಷದ ಪ್ರತ್ಯುಶಾ -ಕಟಾ ಸ್ಪರ್ಧೆಯಲ್ಲಿ ತೃತಿಯ ಸ್ಥಾನ,

13 ವರ್ಷದ ಸುನಿಕ್ಷಾ ಕಟಾ ಸ್ಪರ್ಧೆಯಲ್ಲಿ ತೃತಿಯ ಸ್ಥಾನವನ್ನು ಪಡೆದಿದ್ದಾರೆ

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಆಡಳಿತ ಮಂಡಳಿಯ ಟ್ರಸ್ಟಿಗಳಾದ ಚಕೋರ ಮೆಹತಾ, ಪ್ರಾಚಾರ್ಯರಾದ ಪ್ರೀತಿ ಮೆಹತಾ, ದೈಹಿಕ ಶಿಕ್ಷಣದ ವಿಭಾಗ ಮುಖ್ಯಸ್ಥ ಬಸವರಾಜ ತಳಕೇರಿ, ಕರಾಟೆ ತರಬೇತಿದಾರರಾದ ಕೃಷ್ಣಾ ಗೌಳಿ, ಮಣಿಕಂಠ ಜುಮ್ಮಣ್ಣಾ ಹಾಗೂ ಶಿಕ್ಷಕ ವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ.

## ಬಲಕುಂದಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಮಕ್ಕಳ ಆರೋಗ್ಯ ತಪಾಸಣೆ



ಸಿರುಗುಪ್ಪ-

ತಾಲೂಕಿನ ಬಲಕುಂದಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಬುಧವಾರದಂದು ಶಾಲೆಯ ಎಲ್ಲಾ ಮಕ್ಕಳ ವಾರ್ಷಿಕ ಆರೋಗ್ಯ ತಪಾಸಣೆ ಹಾಗೂ ರಕ್ತ ಪರೀಕ್ಷೆಯನ್ನು ಆರೋಗ್ಯ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿತ್ತು. ಶಾಲೆಯ 320 ಮಕ್ಕಳು ವೈದ್ಯಕೀಯ ತಪಾಸಣೆಗೆ ಒಳಪಟ್ಟರು. ಮಕ್ಕಳ ಆರೋಗ್ಯವನ್ನು ಪರಿಶೀಲಿಸಿ ಸಾಮಾನ್ಯ ಆರೋಗ್ಯ ಸಮಸ್ಯೆಗಳಿಗೆ ಮಾತ್ರೆಗಳನ್ನು ವಿತರಿಸಿ ಚಿಕಿತ್ಸೆ ನೀಡಿದರು. ಹೆಚ್ಚಿನ ಚಿಕಿತ್ಸೆ ಅಗತ್ಯವಿರುವ ಮಕ್ಕಳಿಗೆ ತಾಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳ ಚಿಕಿತ್ಸೆ ಪಡೆಯಲು ಶಿಫಾರಸ್ಸು ಮಾಡಿದರು.

12 ಪರ್ಸೆಂಟ್ ಗಿಂತ ಕಡಿಮೆ ಹಿಮೋಗ್ಲೋಬಿನ್ ಇರುವ ಮಕ್ಕಳಿಗೆ ಸತತವಾಗಿ 90 ದಿನಗಳ ವರೆಗೆ ಬಳಸಲು ಪೋಲಿಕ್ ಆಸಿಡ್ ಮಾತ್ರೆಗಳನ್ನು ವಿತರಿಸಿದರು.

ಆರೋಗ್ಯ ಸಿಬ್ಬಂದಿಯವರು ವಿಕಲಚೇತನ ಮಕ್ಕಳಿಗೆ ದೊರೆಯುವ ಚಿಕಿತ್ಸೆ ಮತ್ತು ಸೌಲಭ್ಯಗಳ ಕುರಿತು ಮಾಹಿತಿಯನ್ನು ನೀಡಿದರು. ಮಳೆಗಾಲದಲ್ಲಿ ಹೆಚ್ಚಾಗಿ ಹರಡುವ ಮಲೇರಿಯಾ, ಡೆಂಗ್ಯೂ ಮುಂತಾದ ರೋಗಗಳನ್ನು ತಡೆಗಟ್ಟಲು ಸೊಳ್ಳೆ ಪರದೆ ಬಳಕೆ, ಸೊಳ್ಳೆ ಬತ್ತಿ ಮತ್ತಿತರ ವಿಧಾನಗಳ ಮೂಲಕ ಸೊಳ್ಳೆಗಳಿಂದ ರಕ್ಷಣೆ ಪಡೆಯಲು ಸೂಚಿಸಿದರು.

ಮಕ್ಕಳ ವೈಯುಕ್ತಿಕ ಮತ್ತು ಸಾಮೂಹಿಕ ಸ್ವಚ್ಛತೆ ಮತ್ತು ಆರೋಗ್ಯದ ಬಗ್ಗೆ ಅರಿವನ್ನು ಮೂಡಿಸಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಗುರುಗಳಾದ ಡಾ. ಎಸ್.ಚಂದ್ರಮೌಳಿ, ಡಾ.ಜಾಫರ್ ಆರೋಗ್ಯ ಇಲಾಖೆಯ ಸಿಬ್ಬಂದಿ, ಶಾಲೆಯ ಎಲ್ಲಾ ಸಿಬ್ಬಂದಿ ವರ್ಗ ಮತ್ತು ಮಕ್ಕಳು ಹಾಜರಿದ್ದರು.



## ರಾಷ್ಟ್ರೀಯ ಹೆದ್ದಾರಿ ವಿಸ್ತರಣೆ ಕಾರ್ಯ ಚುರುಕು

ಸಿರುಗುಪ್ಪ ,

ನಗರದ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ 150ಎ ರಸ್ತೆ ವಿಸ್ತರಣೆ ಕಾಮಗಾರಿಗೆ ಸಂಬಂಧಿಸಿದಂತೆ ಹಾಗೂ ನಕ್ಷೆಯಲ್ಲಿರುವ ರಸ್ತೆ ಒತ್ತುವರಿಯ ಗಡಿಯನ್ನು ಗುರುತಿಸುವ ನಿಟ್ಟಿನಲ್ಲಿ ಕಂದಾಯ, ಭೂಮಾಪನ ಇಲಾಖೆ ಹಾಗೂ ನಗರಸಭೆ ಇಲಾಖೆಯ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ ಗುರುತು ಮಾಡುವ ಕಾರ್ಯ ಭರದಿಂದ ಸಾಗಿದೆ.

ನಗರದ ಪ್ರಮುಖ ರಸ್ತೆಯಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆಗೆ ಮುಕ್ತಿ ನೀಡಲು ಹಾಗೂ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಹೆದ್ದಾರಿ ವಿಸ್ತರಣೆ ಅನಿವಾರ್ಯವಾಗಿದ್ದು, ಈ ಹಿನ್ನೆಲೆಯಲ್ಲಿ ಹಲವು ದಶಕಗಳಿಂದ ನನೆಗುದಿಗೆ ಬಿದ್ದಿದ್ದ ರಸ್ತೆ ವಿಸ್ತರಣೆ ಕಾರ್ಯ ಚುರುಕು ಮೂಡಿರುವುದು ಸಾರ್ವಜನಿಕ ವಲಯದಲ್ಲಿ ಸಂತಸ ಮೂಡಿಸಿದೆ.

ರಸ್ತೆ ಬದಿಯಲ್ಲಿ ಅಂಗಡಿಗಳ ಮಾಲೀಕರಿಗೆ ಮತ್ತು ವ್ಯಾಪಾರಿಗಳಿಗೆ ಕಟ್ಟಡ ನೆಲಸಮಗೊಳ್ಳುವ ಭೀತಿ ಶುರುವಾಗಿದೆ.

ಜತೆಗೆ ನಾನಾ ಇಲಾಖೆಗಳ ಅಧಿಕಾರಿಗಳ ತಂಡವು ದಶಕಗಳಿಂದ ನನೆಗುದಿಗೆ ಬಿದ್ದಿದ್ದ ರಸ್ತೆ ವಿಸ್ತರಣೆ ಕಾರ್ಯ ಜಮೀನು ಹಾಗೂ ಆಸ್ತಿಗಳ ಪರಿಶೀಲನೆ ನಡೆಸಿ, ಹೆದ್ದಾರಿಯ ಗಡಿಯನ್ನು ಗುರುತಿಸಿದೆ. ಹೆದ್ದಾರಿ ವಿಸ್ತರಣೆಯ ವ್ಯಾಪ್ತಿಗೆ ಒಳಪಡುವ ಜಾಗವನ್ನು ಸರ್ವೆ ನಡೆಸಿ, ರಸ್ತೆಯ ಇಕ್ಕೆಲಗಳಲ್ಲಿ ಗುರುತು ಮಾಡಲಾಗಿದೆ.

ಆಸ್ತಿಗಳ ಪರಿಶೀಲಿಸಿ, ವಿಸ್ತರಣಾ ವ್ಯಾಪ್ತಿಗೆ ಬರುವ ಕಟ್ಟಡಗಳು, ಅಂಗಡಿ ಹಾಗೂ ಖಾಸಗಿ ಜಾಗಗಳ ಮಾಹಿತಿ ಸಂಗ್ರಹಿಸಲಾಗುವುದು, ರಸ್ತೆ ಅಭಿವೃದ್ಧಿ ದೃಷ್ಟಿಯಿಂದ ಮುಂದಿನ ದಿನಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆ ಹಾಗೂ ತೆರವು ಕಾರ್ಯಗಳು ನಿಯಮಾನುಸಾರ ನಡೆಯಲಿದ್ದು, ಸಾರ್ವಜನಿಕರು ಹಾಗೂ ರಸ್ತೆ ಬದಿಯ ವ್ಯಾಪಾರಿಗಳು ಯೋಜನೆಗೆ ಸಹಕರಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ ಎನ್ನಲಾಗಿದೆ.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಕಂದಾಯ ಇಲಾಖೆ, ಭೂದಾಖಲೆಗಳ ಇಲಾಖೆ (ಸರ್ವೆ) ಮತ್ತು ನಗರಸಭೆಯ ಹಿರಿಯ ಅಧಿಕಾರಿಗಳು ಇದ್ದರು.

# ಉರ್ದು ಶಿಕ್ಷಕರ ನೇಮಕಾತಿಗೆ ತಕ್ಷಣ ಪೂರಕ ಆದೇಶ ಹೊರಡಿಸಲು ಸರ್ಕಾರಕ್ಕೆ ಪಟೇಲ್ ಮನವಿ



ಕೊಪ್ಪಳ:ರಾಜ್ಯ ಸರ್ಕಾರವು ಇತ್ತೀಚೆಗೆ ಹೊರಡಿಸಿರುವ ಶಿಕ್ಷಕರ ನೇಮಕಾತಿ ಆದೇಶದಲ್ಲಿ ಉರ್ದು ಮಾಧ್ಯಮ ಶಾಲಾ ಶಿಕ್ಷಕರ ಹುದ್ದೆಗಳನ್ನು ಕಡೆಗಣಿಸಲಾಗಿದ್ದು, ತಕ್ಷಣವೇ ಪೂರಕ ಆದೇಶ ಹೊರಡಿಸಿ ಉರ್ದು ಶಿಕ್ಷಕರ ನೇಮಕಾತಿಯನ್ನು ಕೈಗೊಳ್ಳಬೇಕು ಎಂದು ಅಲ್ಪಸಂಖ್ಯಾತ ಸಮುದಾಯದ ಹಿರಿಯ ಮುಖಂಡ ಹಾಗೂ ಕೊಪ್ಪಳ ನಗರಸಭೆಯ ಮಾಜಿ ಅಧ್ಯಕ್ಷ ಅಮ್ಜದ್ ಪಟೇಲ್ ರವರು ಪ್ರಕಟಣೆ ಮೂಲಕ ಸರ್ಕಾರಕ್ಕೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಅವರಿಗೆ ಮನವಿ ಮಾಡಿಕೊಂಡು ಒತ್ತಾಯಪಡಿಸಿದ್ದಾರೆ,

ಈ ಕುರಿತು ಹೇಳಿಕೆ ನೀಡಿದ ಅವರು ಸರ್ಕಾರ 15,000 ಶಿಕ್ಷಕರ ನೇಮಕಾತಿಗೆ ಮುಂದಾಗಿರುವುದು ಪ್ರಗತಿಪರ ಹೆಜ್ಜೆಯಾಗಿದ್ದರೂ ಕೂಡಉರ್ದು ಮಾಧ್ಯಮದ ಶಿಕ್ಷಕರ ಹುದ್ದೆಗಳನ್ನು ಸಂಪೂರ್ಣವಾಗಿ ಹೊರಗಿಟ್ಟಿರುವುದು ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯದ ವಿದ್ಯಾರ್ಥಿಗಳಿಗೆ ಎಸಗಿದ ಶೈಕ್ಷಣಿಕ ಅನ್ಯಾಯವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಭಾರತೀಯ ಸಂವಿಧಾನದ ವಿಧಿ 21 ಎ (ಶಿಕ್ಷಣದ ಹಕ್ಕು) ಹಾಗೂ ವಿಧಿ 350 ಎ, ಪ್ರಕಾರ ಅಲ್ಪಸಂಖ್ಯಾತ ಮುಸ್ಲಿಂ ಮಕ್ಕಳಿಗೆ ಮಾತೃಭಾಷೆಯಲ್ಲೇ ಪ್ರಾಥಮಿಕ ಶಿಕ್ಷಣ ನೀಡುವುದು ಸರ್ಕಾರದ ಕರ್ತವ್ಯ. ಉರ್ದು ಶಿಕ್ಷಕರ ನೇಮಕಾತಿ ತಡೆಯುವುದು ಈ ಸಂವಿಧಾನಾತ್ಮಕ ಹಕ್ಕಿನ ಉಲ್ಲಂಘನೆಯಾಗುತ್ತದೆ ಎಂಬುದು ನನ್ನ ಕಳಕಳಿಯ ಅಭಿಪ್ರಾಯವಾಗಿದೆ,

ರಾಜ್ಯದ ನೂರಾರು ಉರ್ದು ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದಾಗಿ ಬಡ ಮತ್ತು ಹಿಂದುಳಿದ ವರ್ಗಗಳ ಮಕ್ಕಳ ಶಿಕ್ಷಣದ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ. ಶಿಕ್ಷಕರಿಲ್ಲದೆ ಹಲವು ಶಾಲೆಗಳು ಮುಚ್ಚುವ ಹಂತ ತಲುಪಿವೆ.

ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ರಾಜ್ಯದ ಅಭಿವೃದ್ಧಿಗೆ ಶ್ರಮಿಸಿದ ಸಮುದಾಯಕ್ಕೆ ಶೈಕ್ಷಣಿಕ ಕ್ಷೇತ್ರದಲ್ಲಿ ಸಮಾನ ಅವಕಾಶ ಒದಗಿಸುವುದು ಸಾಮಾಜಿಕ ನ್ಯಾಯದ ಹಕ್ಕಾಗಿದೆ.

ಆದ್ದರಿಂದ ಸರ್ಕಾರ ಹಾಗೂ ವಿಶೇಷವಾಗಿ ಸರ್ಕಾರದ ಶಿಕ್ಷಣ ಸಚಿವರು ಈ ವಿಷಯವನ್ನು ಆಡಳಿತಾತ್ಮಕವಾಗಿ ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಪ್ರಸ್ತುತ ನೇಮಕಾತಿ ಪ್ರಕ್ರಿಯೆಯಲ್ಲೇ ಉರ್ದು ಮಾಧ್ಯಮದ ಶಿಕ್ಷಕರ ಹುದ್ದೆಗಳನ್ನು ಸೇರ್ಪಡೆಗೊಳಿಸಿ ತಕ್ಷಣ ವಿಶೇಷ ಅಧಿಸೂಚನೆ ಹೊರಡಿಸಬೇಕು ಹಾಗೂ ಉರ್ದು ಮಾಧ್ಯಮ ಶಾಲೆಗಳ ಉಳಿವು ಮತ್ತು ವಿದ್ಯಾರ್ಥಿಗಳ ಭವಿಷ್ಯವನ್ನು ರಕ್ಷಿಸಬೇಕು ಎಂದು ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಹಾಗೂ ಶಿಕ್ಷಣ ಸಚಿವ ಮಧು ಬಂಗಾರಪ್ಪ ನವರಿಗೆ ಕೊಪ್ಪಳ ನಗರಸಭೆಯ ಮಾಜಿ ಅಧ್ಯಕ್ಷ ಹಾಗೂ ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯದ ಹಿರಿಯ ಮುಖಂಡ ಅಮ್ಜದ್ ಪಟೇಲ್ ರವರು ಕಳಕಳಿಯ ಮನವಿ ಮಾಡಿಕೊಂಡು ಒತ್ತಾಯಪಡಿಸಿದ್ದಾರೆ,

## ಬಳ್ಳಾರಿಯಲ್ಲಿ ಬಾಲಕಾರ್ಮಿಕ ವಿರೋಧಿ ಕಾರ್ಯಾಚರಣೆ: ಇಬ್ಬರು ಮಕ್ಕಳ ರಕ್ಷಣೆ

ಬಳ್ಳಾರಿ,ಆ.20-

ನಗರದಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಜಂಟಿ ಸಹಯೋಗದಲ್ಲಿ ವಿಶೇಷ ತಪಾಸಣಾ ಕಾರ್ಯಾಚರಣೆ ನಡೆಸಲಾಗಿದ್ದು, ಕೆಲಸದಲ್ಲಿ ತೊಡಗಿದ್ದ ಇಬ್ಬರು ಬಾಲ/ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದೆ.

ದೇಶವ್ಯಾಪಿ ನಡೆಯುತ್ತಿರುವ ಪ್ಯಾನ್-ಇಂಡಿಯಾ ರಕ್ಷಣಾ ಮತ್ತು ಪುನರ್ವಸತಿ ಅಭಿಯಾನದ ಅಂಗವಾಗಿ, ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಈ ಕಾರ್ಯಾಚರಣೆ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರ ಅಧ್ಯಕ್ಷತೆಯಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್‌ಫೋರ್ಸ್ ಸಮಿತಿ ಸಭೆ ನಡೆಸಿದ ನಂತರ ಮಂಗಳವಾರ ನಗರದ ವಿವಿಧೆಡೆ ದಾಳಿ ನಡೆಸಲಾಯಿತು.

ಟಾಸ್ಕ್‌ಫೋರ್ಸ್ ತಂಡವು ಬಳ್ಳಾರಿ ನಗರದ ಎಂ.ಜಿ. ಹತ್ತಿರದ ಪಟೇಲ್ ನಗರ, ಅನಂತಪುರ ರಸ್ತೆ ಸೇರಿದಂತೆ ಪ್ರಮುಖ ಬೀದಿಗಳಲ್ಲಿರುವ ವಾಣಿಜ್ಯ ಮಳಿಗೆ ಹಾಗೂ ಉದ್ದಿಮೆಗಳ ಮೇಲೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿತು.

# ಕಾಲುವೆಯಲ್ಲಿನ ಅಕ್ರಮ ಪೈಪ್ ತೆರವುಗೊಳಿಸಲು ಸೂಚನೆ



ಸಿರುಗುಪ್ಪ - ಬೈರಾಪುರ, ಸಿರಿಗೇರಿ, ದಾಸಾಪುರ, ದೇವಿನಗರಗಳಲ್ಲಿ ಅನೇಕರು ಅನಧಿಕೃತವಾಗಿ ಬಾಗೇವಾಡಿ ಕಾಲುವೆಗೆ ಪೈಪ್ ಹಾಕಿಕೊಂಡು ನೀರನ್ನು ಅವರ ಭೂಮಿಗಳಿಗೆ ಹಾಯಿಸಿಕೊಳ್ಳುತ್ತಿದ್ದಾರೆಂದು ಬಾಗೇವಾಡಿ ಕಾಲುವೆ ರೈತರು ದೂರು ಸಲ್ಲಿಸಿದ್ದಾರೆ


ಕಾರಣ ಅಕ್ರಮ ಪೈಪುಗಳನ್ನು ತೆರವು ಮಾಡಬೇಕೆಂದು ನೀರಾವರಿ ಇಲಾಖೆ, ಕಂದಾಯ ಇಲಾಖೆ, ಪೊಲೀಸ್ ಇಲಾಖೆ ಅಧಿಕಾರಿಗಳಿಗೆ ಉಪ ತಹಶೀಲ್ದಾರ್ ಸಿದ್ಧಾರ್ಥ ಕಾರಂಜಿ ಸೂಚಿಸಿದರು. ನಗರದ ತಾಲೂಕು ಕಚೇರಿಯಲ್ಲಿ ನಡೆದ ಬಾಗೇವಾಡಿ ಕಾಲುವೆಯ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಅನಧಿಕೃತವಾಗಿ ಪರವಾನಿಗೆ ಇಲ್ಲದೇ ಟ್ರಾನ್ಸ್ ಫಾರ್ಮರ್ ಗಳನ್ನು ವಶಕ್ಕೆ ಪಡೆಯಬೇಕು, ಯಾವುದೇ ಕಾರಣಕ್ಕೂ ಬಾಗೇವಾಡಿ ಡಿಸ್ಟ್ರಿಬ್ಯೂಟರ್ ಕಾಲುವೆ ಕೆಳಭಾಗದ ರೈತರ ಬೆಳೆಗೆ ನೀರು ಹರಿಸಲು ಅನಧಿಕೃತ ವಿದ್ಯುತ್ ಸಂಪರ್ಕ ಕಡಿತಗೊಳಿಸಬೇಕು, ನೀರಾವರಿ ಇಲಾಖೆಯ ಅಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಪೊಲೀಸ್ ಠಾಣೆಯಲ್ಲಿ ರೈತರ ಸಭೆ ಕರೆದು ಅಕ್ರಮವಾಗಿ ನೀರು ಹರಿಸಿಕೊಂಡರೆ ಸೂಕ್ತ ಕ್ರಮ ತೆಗೆದುಕೊಳ್ಳುವ ಬಗ್ಗೆ ರೈತರಿಗೆ ಮಾಹಿತಿ ನೀಡಬೇಕು

ಜೆಸ್ಕಾಂ ಇಲಾಖೆಯ ಅಧಿಕಾರಿಗಳು ಕಾಲುವೆ ವ್ಯಾಪ್ತಿಯಲ್ಲಿ ಅಕ್ರಮವಾಗಿ ವಿದ್ಯುತ್ ಸಂಪರ್ಕ ಪಡೆದು ಕೊಂಡಿದ್ದರೆ, ಸಂಪರ್ಕವನ್ನು ಕಡಿತಗೊಳಿಸಲು ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದರು.

ಕಾಲುವೆ ಮೇಲೆ ಗಸ್ತು ತಿರುಗಲು ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡಲಾಗಿದ್ದು, ಕಂದಾಯ ಅಧಿಕಾರಿಗಳು, ನೀರಾವರಿ ಇಲಾಖೆಯ ಅಧಿಕಾರಿಗಳಿಗೆ ಕಾರನೀಡಬೇಕು ಎಂದ ಅವರು, ಒಟ್ಟಾರೆ ಕಾಲುವೆಯಲ್ಲಿ ಸುಗಮವಾಗಿ ನೀರು ಹರಿಯಲು ಕ್ರಮ ತೆಗೆದುಕೊಳ್ಳಬೇಕು ಎಂದು ಹೇಳಿದರು.

ಬಾಗೇವಾಡಿ ಕಾಲುವೆಯ ಮುನೀರ್ ಜೆಸ್ಕಾಂ ಇಲಾಖೆಯ ಎಇಇ ಗಾಯತ್ರಿ, ಕಂದಾಯ ಅಧಿಕಾರಿಗಳಾದ ಮಂಜುನಾಥ, ಗಣೇಶ, ಹನುಮಂತಪ್ಪ, ಪಿಎಸ್‌ಐಗಳಾದ ಪರಶುರಾಮ, ಸದ್ದಾಮ್ ಹುಸೇನ್, ಶಶಿಧರ ನಾಯಕ, ವಿಜಯಕುಮಾರ್ ರೈತ ಮುಖಂಡ ಮಲ್ಲಿಕಾರ್ಜುನ, ಜೆಸ್ಕಾಂ ಇಲಾಖೆಯ ಜೆಇ ಶೇಕ್ಷವಲಿ ಮತ್ತಿತರರು ಇದ್ದರು.

# ವಿವಿಧ ಕ್ಷೇತ್ರಗಳಲ್ಲಿ ಹೋರಾಟ ಸಾಮಾಜಿಕ ಸೇವೆ ಸಾಧನೆಗೈಧ ಸಾಧಕರಿಗೆ ಸನ್ಮಾನ ಸಮಾರಂಭ




ಜೈ ಕರುನಾಡು ಜನಪರ ಸಮಿತಿ: ಕಲಬುರಗಿ ನಗರದ. ಕನ್ನಡ ಭವನದಲ್ಲಿ ದಿನಾಂಕ 18=08=2026ರ'ಂದ'ು ಸಾಯಂಕಾಲ 6=00 ಗಂಟೆಗೆ.ಜೈ ಕರುನಾಡು ಜನಪರ ಸಮಿತಿ ವತಿಯಿಂದ.

ಜೈ ಕರುನಾಡು ಜನಪರ ಸಮಿತಿ: ವಿವಿಧ ಕ್ಷೇತ್ರಗಳಲ್ಲಿ ಹೋರಾಟ ಸಾಮಾಜಿಕ ಸೇವೆ ಸಾಧನೆಗೈದ ಸಾಧಕರಿಗೆ ಸನ್ಮಾನ ಸಮಾರಂಭ

ದಿವ್ಯ ಸಾನಿಧ್ಯ : ಧರ್ಮರತ್ನ ಪೂಜ್ಯ ಶ್ರೀ ಡಾ. ಮಲ್ಲಣ್ಣಪ್ಪ ಮಹಾ ಸ್ವಾಮಿ ಜಿಯವರು. ಅಲ್ಲಮ ಪ್ರಭು ಸಂಸ್ಥಾನ ಮಠ ತೋನಸನ ಹಳ್ಳಿ. ಎಸ್ ಲಕ್ಷ್ಮಿ ಹಾಗು ಶ್ರೀ ಪರಮ ಪೂಜ್ಯ ಡಾ. ಅಪ್ಪಾರಾವ ದೇವಿ ಮುತ್ಯಾ ಮಹಾರಾಜರು ಮಹಾಲಕ್ಷ್ಮಿ ಶಕ್ತಿ ಪೀಠ ಶ್ರೀನಿವಾಸ ಸರಡಗಿ ಉದ್ಘಾಟನೆ : ಕರ್ನಾಟಕ ರಾಜ್ಯ ಕೋಲಿ ಕಬ್ಬಲಿಗ ಎಸ್ ಟಿ ಹೋರಾಟ ಸಮಿತಿ ರಾಜ್ಯ ಲಚ್ಚಪ್ಪ ಜಮಾದಾರ ಜ್ಯೋತಿ ಬೆಳಗುಸುವರು :ಶ್ರೀ ಸಿದ್ದಲಿಂಗ ಮಲಶೆಟ್ಟಿ ನಿವೃತ್ತ ಯೋಧರು ಕನ್ನಡಾಂಬೆ ಭಾವ ಚಿತ್ರಕೆ ಪೂಜೆ : ಮಡಿವಾಳಪ್ಪ ಚ. ಭ್ಯಾಕೋಡ್ ನಿವೃತ್ತ. ಮುಖ್ಯ ಗುರುಗಳು ಜೇವರ್ಗಿ ಪ್ರಶಸ್ತಿ. ಪ್ರಧಾನ. ಶ್ರೀ ನೀಲಕಂಠ ರಾವ ಮೂಲಗೆ ಕಾಂಗ್ರೆಸ್ ಮುಖಂಡರು ಅಧ್ಯಕ್ಷತೆ : ಡಾ. ಫಾರೂಕ್ ಅಹ್ಮದ್ ಮಣೂರ್ ಮಣೂರ ಆಸ್ಪತ್ರೆ ನಿರ್ದೇಶಕರು ಕಲಬುರಗಿ. ನೇತೃತ್ವ : ಸಿದ್ದು (ಗೌತಮ)ಹೇಚ್ ಜಮಾದಾರ. ರಾಜ್ಯ ಅಧ್ಯಕ್ಷರು ಜೈ ಕರುನಾಡು ಜನಪರ ಸಮಿತಿ. ಅಮೀರ್ ನಿಂಬಾಳ್ಕರ್ ನಿರೂಪಣೆ. ಡಾ. ಹಣಮಂತರಾಯ ರಾಮಪೂರೆ. ಅರುಣ್ ಹಳ್ಳಿಕೆಡ್ ವಿವಿಧ ಕ್ಷೇತ್ರಗಳಲ್ಲಿ ಹೋರಾಟ ಸಾಮಾಜಿಕ ಸೇವೆ ಸಾಧನೆ ಗೈದ ಸಾಧಕರಿಗೆ. 36. ಜನರಿಗೆ ಸನ್ಮಾನ. ಶಿವಾನಂದ ಆರ್ ಹೋನಗುಂಟಿ ಸಂತೋಷ ಎಸ್ ಬೆಣ್ಣೂರ ಮಲ್ಲಿಕಾರ್ಜುನ ವಾಲಿಕಾರ ಶಿವಲಿಂಗ ಹಳಿಮನಿ ಸಂದೀಪ್ ಭರಣಿ ರವಿ ದೇಗಾಂವ ಶಿವಕುಮಾರ್ ಎಮ್ ಮುಡ್ಡಿ ಅಂಬಾಜಿ ಪಿ ಮೇಟಿ ನಾಗೇಶ್. ಸಿ ವಡಗೇರಿ ಶಿವಾನಂದ ಉಪ್ಪಿನ್ ಸಾಹುಕಾರ್ ಬಸಲಿಂಗಪ್ಪ ಖಾನಾಪೂರ್ ಸುಭಾಸ ಚಂದ್ರ. ದುಕಾನದಾರ ಮಲ್ಲಿಕಾರ್ಜುನ ವಾಲಿಕಾರ ಹಸರಗುಂಡಗಿ ಎಮ್ ಎ ಸಿದ್ದಿಕ್ ರಾಜೇಶ್ ಬಿ ಹಡಗಿಲ್ಕರ್ ಶರಣು ಜಮಾದಾರ್ ಆನಂದ ಕದ್ದರಗಿ ಗೌತಮ್ ಸಂಗೋಳಗಿ ಜಗನಾಥ್ ಹಾಲಪ್ಪ ರಾಹುಲ್ ಹೂನಳ್ಳಿ ಗುಂಡು ಐನಾಪುರ ಸಂತೋಷ ಕುಮಾರ ಗಟ್ಟು ಸಮ್ರಿನ್ ಶೇಕ್ ಮಲ್ಲಿಕಾರ್ಜುನ ಸ್ವಾಮಿ ಸಿದ್ದಣ್ಣಗೌಡ ಪಾಟೀಲ ರಾಜೇಶ್ ತೇಲಿ ಮಲಿಕಪ್ಪ ಎಸ್ ಜಮಾದಾರ ಶಿವಶರಣಪ್ಪ ಎನ ವಡಗೇರಿ ರಾಜಕುಮಾರ ಕಟ್ಟಿಮನಿ ಅನಿಲಕುಮಾರ ಜಾಧವ ಖಾಜಿ ಮಹ್ಮದ ಮೋಹಿನುದಿನ್ ಮಾಡಲಾಯಿತು 41ಜನರಿಗೆ ಸನ್ಮಾನ ಮಾಡಲಾಯಿತು ಈ ಸಂದರ್ಭದಲ್ಲಿ. ಜೈ ಕರುನಾಡು ಜನಪರ ಸಮಿತಿ ಕಾರ್ಯಕರ್ತರು ಕನ್ನಡ ಅಭಿಮಾನಿಗಳು. ಹೋರಾಟ ಗಾರರು ವೈದ್ಯರು ರೈತರು ಸರ್ವ ಸಮಾಜದವರು ಈ ಪ್ರಶಸ್ತಿ ಸನ್ಮಾನ ಸಮಾರಂಭ ಕಾರ್ಯಕ್ರಮಕ್ಕೆ ಬಂದು ಯಶಸ್ವಿಮಾಡಿದರು

ಡಿಸ್ಕ್ಲೈಮರ್:-ಈ ಪತ್ರಿಕೆಯಲ್ಲಿ ಪ್ರಕಟವಾಗುವ ಸುದ್ದಿ, ಅಭಿಪ್ರಾಯಗಳು, ಚಿತ್ರಗಳು ಹಾಗೂ ಮಾಹಿತಿಗಳು ವಿಶ್ವಾಸಾರ್ಹ ಮೂಲಗಳ ಆಧಾರದ ಮೇಲೆ ಸಾರ್ವಜನಿಕ ಹಿತಾಸಕ್ತಿ ಮತ್ತು ಜಾಗೃತಿಗಾಗಿ ಮಾತ್ರ ಪ್ರಕಟಿಸಲ್ಪಟ್ಟಿವೆ. ಯಾವುದೇ ವ್ಯಕ್ತಿ, ಸಂಸ್ಥೆ ಅಥವಾ ಸಮುದಾಯವನ್ನು ಅವಹೇಳನಗೊಳಿಸುವ, ಅವಮಾನ ಮಾಡುವ ಅಥವಾ ಖಾಸಗಿ ಹಕ್ಕಿಗೆ ಧಕ್ಕೆ ತರುವ ಉದ್ದೇಶ ಇಲ್ಲ.


**ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ**

## ಮಹಸಭಾ ಗುತ್ತಿಗೆದಾರರ ಪದಾಧಿಕಾರಿಗಳ ಆಯ್ಕೆ

ಶಿಗ್ಗಾವ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ಮಾದರ ಮಹಾಸಭಾ ಗುತ್ತಿಗೆದಾರ ಸಂಘ ವ್ಯವಸ್ಥಾಪಕರಾದ.ಡಿ. ಸಿ.ರಾಜಣ್ಣ ಇವರ ಆದೇಶದ ಮೇರೆಗೆ

ಶಿಗ್ಗಾವ ತಾಲ್ಲೂಕಿನಲ್ಲಿ ಕರ್ನಾಟಕ ಮಾದರ ಮಹಾಸಭಾ ಗುತ್ತಿಗೆದಾರ ಸಂಘ (ರೀ), ಶಿಗ್ಗಾವ ತಾಲೂಕ ಘಟಕದ ಅಧ್ಯಕ್ಷರಾಗಿ ಸುರೇಶ ಮುಡೆಣ್ಣವರ ಆಯ್ಕೆ ಮಾಡಲಾಯಿತು ಹಾಗೂ ಅವರ ಅಧ್ಯಕ್ಷತೆಯಲ್ಲಿ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು,

ಉಪಾಧ್ಯಕ್ಷರಾಗಿ ★ ಮಂಜುನಾಥ ಬ ಹರಿಜನ ★ಗೌರವಅಧ್ಯಕ್ಷರಾರಿ ★ ಸಂತೋಷ ಕ ಕಟ್ಟಿಮನಿ ★ಪ್ರಧಾನ ಕಾರ್ಯದರ್ಶಿಯಾಗಿ ★ ಷಣ್ಮುಖಪ್ಪ ಮಾದರ ★ಸಂಘಟನಾ ಕಾರ್ಯದರ್ಶಿಯಾಗಿ ★ ಸಂತೋಷ ದೊಡ್ಡಮನಿ ★ಕಾರ್ಯದರ್ಶಿ ಕಾರ್ತಿಕ ವಿ ದೊಡ್ಡಮನಿ ಖಂಜಾಸಿ ಮಾರುತಿ ಹರಿಜನ ಸದಸ್ಯರುರುಗಳನ್ನಾಗಿ ಸುನೀಲ ತಿಮ್ಮಾಪುರ, ಫಕ್ಕೀರೇಶ ಹರಿಜನ, ನಿಂಗರಾಜ ದೊಡ್ಡಮನಿ, ಪ್ರಕಾಶ ಹರಿಜನ. ಆಯ್ಕೆ ಮಾಡಲಾಯಿತು ಎಂದು ಅಧ್ಯಕ್ಷರಾದ ಸುರೇಶ್ ಮುಡೆಣ್ಣವರ ಪತ್ರಿಕಾ ಪ್ರಕಟಣೆ ಮಾಡಿದರು.



Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR